ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1705
ಮಾನ್ಯ ಸದಸ್ಯರ ಹೆಸರು	ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	23.03.2020
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಹಿಂದುಳಿದ ವರ್ಗಗಳ ಜನರ ಅಭಿವೃದ್ಧಿಗಾಗಿ ಸರ್ಕಾರ ಜಾರಿಗೊಳಿಸಿರುವ ಯೋಜನೆಗಳು ಯಾವುವು; ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳು ಯಾವುವು; (ಯೋಜನಾವಾರು ವಿವರ ನೀಡುವುದು)	**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ಹಿಂದುಳಿದ ವರ್ಗಗಳ ಜನರ ಅಭಿವೃದ್ಧಿಗಾಗಿ ಸರ್ಕಾರ ಜಾರಿಗೊಳಿಸಿರುವ ಯೋಜನೆಗಳ ವಿವರ ಹಾಗೂ ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳ ವಿವರಗಳ ಪ್ರತಿ ಲಗತ್ತಿಸಿದೆ. **ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ** ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಹಿಂದುಳಿದ ವರ್ಗಗಳ ಜನರಿಗೆ ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. 1. ಚೈತನ್ಯ ಸಹಾಯಧನ. 2. ಡಿ.ದೇವರಾಜ ಅರಸು ಸ್ವಯಂ ಉದ್ಯೋಗ ಸಾಲ. 3. ಕಿರು ಸಾಲ 4. ಅರಿವು-ಶೈಕ್ಷಣಿಕ ಸಾಲ. 5. ವಿದೇಶಿ ವಿಶ್ವವಿದ್ಯಾಲಯದಲ್ಲಿ ಉನ್ನತ ವ್ಯಾಸಂಗಕ್ಕೆ ಬಡ್ಡಿ ರಹಿತ ಸಾಲ. 6. ಗಂಗಾ ಕಲ್ಯಾಣ ನೀರಾವರಿ. 7. ಸಾಂಪ್ರದಾಯಿಕ ವೃತ್ತಿದಾರರ ಹಾಗೂ ಕುಶಲಕರ್ಮಿಗಳಿಗೆ ಆರ್ಥಿಕ ನೆರವು. ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳ ಯೋಜನವಾರು ವಿವರಗಳ ಪ್ರತಿ ಲಗತ್ತಿಸಿದೆ. **ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ** ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದಿಂದ ಉಪ್ಪಾರ ಮತ್ತು ಇದರ ಉಪ ಜಾತಿಗಳ ಅಭಿವೃದ್ಧಿಗಾಗಿ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. 1. ಸ್ವಯಂ ಉದ್ಯೋಗ ಸಾಲ ಯೋಜನೆ. 2. ಅರಿವು ಶೈಕ್ಷಣಿಕ ಸಾಲ ಯೋಜನೆ. 3. ಗಂಗಾ ಕಲ್ಯಾಣ ನೀರಾವರಿ ಯೋಜನೆ ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ.

.....2

<u>ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ</u>

ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದಿಂದ ಬೆಸ್ತ, ಕೋಳಿ, ಕಬ್ಬಲಿಗ, ಮೊಗವೀರ, ಗಂಗಾಮತ ಮತ್ತು ಇದರ ಉಪ ಜಾತಿಗಳ ಅಭಿವೃದ್ಧಿಗಾಗಿ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

1. ಸ್ವಯಂ ಉದ್ಯೋಗ ಸಾಲ ಯೋಜನೆ
2. ಅರಿವು ಶೈಕ್ಷಣಿಕ ಸಾಲ ಯೋಜನೆ
3. ಗಂಗಾ ಕಲ್ಯಾಣ ನೀರಾವರಿ ಯೋಜನೆ

ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ.

ಆ) ಕಳೆದ 3 ವರ್ಷಗಳಲ್ಲಿ ಈ ಯೋಜನೆಗಳಡಿ ಹಾಸನ ಜಿಲ್ಲೆಗೆ ಬಿಡುಗಡೆ ಮಾಡಿದ ಅನುದಾನವೆಷ್ಟು; ಖರ್ಚಾಗಿರುವ ಅನುದಾನ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

<u>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ</u>

ಕಳೆದ 3 ವರ್ಷಗಳಲ್ಲಿ ವಿವಿಧ ಯೋಜನೆಗಳಡಿ ಹಾಸನ ಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನ ಹಾಗೂ ಖರ್ಚಾಗಿರುವ ಅನುದಾನದ ತಾಲ್ಲೂಕುವಾರು ವಿವರವನ್ನು <u>www.backwardclasses.kar.nic.in</u> ನಲ್ಲಿ ನೀಡಲಾಗಿದೆ.

<u>ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ</u>

ಕಳೆದ 3 ವರ್ಷಗಳಲ್ಲಿ ವಿವಿದ ಯೋಜನೆಗಳಡಿ ಹಾಸನ ಜಿಲ್ಲೆಗೆ ಬಿಡುಗಡೆ ಮಾಡಿದ ಅನುದಾನ ರೂ.2154.48ಲಕ್ಷಗಳು. ಖರ್ಚಾಗಿರುವ ಅನುದಾನ ರೂ.2029.51ಲಕ್ಷಗಳು. ತಾಲ್ಲೂಕುವಾರು ವಿವರಗಳನ್ನು <u>www.karnataka.gov.in /dbcdc</u> ನಲ್ಲಿ ನೀಡಲಾಗಿದೆ.

<u>ಉಪ್ಪಾರ ಅಭಿವೃದ್ಧ ನಿಗಮ ನಿಯಮಿತ</u>

ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನ ಮತ್ತು ಖರ್ಚಾಗಿರುವ ಅನುದಾನ ಈ ಕೆಳಕಂಡಂತಿದೆ.

ಕ್ರಸಂ.	ವರ್ಷ	ಬಿಡುಗಡೆಯಾಗಿರುವ ಅನುದಾನ	ಖರ್ಚಾಗಿರುವ ಅನುದಾನ
1	2016-17	-	-
2	2017-18	-	-
1	2018-19	25.00	12.50

<u>ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ</u>

ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನ ಮತ್ತು ಖರ್ಚಾಗಿರುವ ಅನುದಾನ ಈ ಕೆಳಕಂಡಂತಿದೆ.

ಕ್ರಸಂ.	ವರ್ಷ	ಬಿಡುಗಡೆಯಾಗಿರುವ ಅನುದಾನ	ಖರ್ಚಾಗಿರುವ ಅನುದಾನ
1	2016-17	-	-
2	2017-18	-	-
1	2018-19	10.50	5.50

.....3

ಇ)	ಈ ಯೋಜನೆಗಳ ಸದುಪಯೋಗ ಪಡೆದುಕೊಂಡ ಫಲಾನುಭವಿಯ ಹೆಸರು ಮತ್ತು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ನೀಡುವುದು?	**<u>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ</u>** ಹಾಸನ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ವಿವಿಧ ಯೋಜನೆಗಳ ಸದುಪಯೋಗ ಪಡೆದುಕೊಂಡ ಫಲಾನುಭವಿಗಳ, ತಾಲ್ಲೂಕುವಾರು ವಿವರಗಳನ್ನು www.backwardclasses.kar.nic.in ನಲ್ಲಿ ನೀಡಲಾಗಿದೆ. **<u>ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ</u>** ಹಾಸನ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ವಿವಿಧ ಯೋಜನೆಗಳ ಸದುಪಯೋಗ ಪಡೆದುಕೊಂಡ ಫಲಾನುಭವಿಗಳ ಹೆಸರು ಮತ್ತು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ವಿವರಗಳನ್ನು www.karnataka.gov.in/dbcdc ನಲ್ಲಿ ನೀಡಲಾಗಿದೆ. **<u>ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ</u>** ಹಾಸನ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ವಿವಿಧ ಯೋಜನೆಗಳ ಸದುಪಯೋಗ ಪಡೆದುಕೊಂಡ ಫಲಾನುಭವಿಗಳ ಹೆಸರು ಮತ್ತು ವಿಳಾಸದ ವಿವರವನ್ನು ಅನುಬಂಧ-2ರಲ್ಲಿ ನೀಡಲಾಗಿದೆ. **<u>ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ</u>** ಹಾಸನ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ವಿವಿಧ ಯೋಜನೆಗಳ ಸದುಪಯೋಗ ಪಡೆದುಕೊಂಡ ಫಲಾನುಭವಿಗಳ ಹೆಸರು ಮತ್ತು ವಿಳಾಸದ ವಿವರವನ್ನು ಅನುಬಂಧ-2ರಲ್ಲಿ ನೀಡಲಾಗಿದೆ.

ಸಂ:ಹಿಂವಕ 216 ಬಿಎಂಎಸ್ 2020

(ಬಿ.ಶ್ರೀರಾಮುಲು)
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1705 ಕ್ಕೆ ಅನುಬಂಧ-1

ಕಾರ್ಯಕ್ರಮಗಳ ವಿವರ

	ಶೈಕ್ಷಣಿಕ ಕಾರ್ಯಕ್ರಮಗಳು
I	**ವಿದ್ಯಾರ್ಥಿನಿಲಯಗಳ ನಿರ್ವಹಣೆ**
1	ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು
2	ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳು
3	ಸರ್ಕಾರಿ ಆಶ್ರಮಶಾಲೆಗಳು
4	ಖಾಸಗಿ ಅನುದಾನಿತ ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳು
5	ಖಾಸಗಿ ಅನುದಾನಿತ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳು
6	ಖಾಸಗಿ ಅನುದಾನಿತ ಅನಾಥಾಲಯಗಳು
7	ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ
II	**ವಿದ್ಯಾರ್ಥಿವೇತನ ಕಾರ್ಯಕ್ರಮಗಳು**
1	ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ
2	ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ
3	ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ
4	ಶುಲ್ಕ ಮರು ಪಾವತಿ
5	ಪೂರ್ಣಾವಧಿ ಪಿ.ಎಚ್.ಡಿ ಮಾಡುವ ವಿದ್ಯಾರ್ಥಿಗಳಿಗೆ ಫೆಲೋಷಿಪ್
6	ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನ
7	ದೇವರಾಜ ಅರಸು ಪ್ರತಿಭಾ ಪುರಸ್ಕಾರ
8	ನಿಲಯಾರ್ಥಿಗಳಿಗೆ ಪ್ರೋತ್ಸಾಹಧನ
9	ಐ.ಐ.ಟಿ, ಐ.ಐ.ಎಂ, ಐ.ಐ.ಎಸ್ಸಿ ಇತ್ಯಾದಿಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಒಂದು ಬಾರಿ ರೂ.2.00 ಲಕ್ಷ ಪ್ರೋತ್ಸಾಹಧನ
III	**ತರಬೇತಿ ಕಾರ್ಯಕ್ರಮಗಳು**
1	ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಪರೀಕ್ಷಾ ಪೂರ್ವ ತರಬೇತಿ
2	ನರ್ಸಿಂಗ್ ತರಬೇತಿ
3	ವಿಶ್ವವಿದ್ಯಾಲಯಗಳಲ್ಲಿನ ಹಿಂದುಳಿದ ವರ್ಗಗಳ ಕೋಶಕ್ಕೆ ಅನುದಾನ
4	ಕಾನೂನು ಪದವೀಧರರಿಗೆ ಶಿಷ್ಯವೇತನ
5	ಹೊಲಿಗೆ ತರಬೇತಿ ಕೇಂದ್ರಗಳ ನಿರ್ವಹಣೆ
6	ಸೇನೆಗಳಿಗೆ ಆಯ್ಕೆಯಾಗುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ತರಬೇತಿ

7	ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಲ್ಲಿರುವ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ಹಾಗೂ ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ತರಬೇತಿ
IV	**ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ಅಭಿವೃದ್ಧಿ ಕಾರ್ಯಕ್ರಮಗಳು**
1	ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ
2	ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಅರ್ಹತಾ ವಿದ್ಯಾರ್ಥಿವೇತನ
3	ಆಶ್ರಮ ಶಾಲೆಗಳ ನಿರ್ವಹಣೆ
4	ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶಾವಕಾಶ
5	ಅರಿವು ಮೂಡಿಸುವ ಕಾರ್ಯಕ್ರಮ
6	ಮೂಲಭೂತ ಸೌಕರ್ಯಗಳು
7	ವಸತಿ ಸೌಲಭ್ಯ
8	ನಿವೇಶನ ಹಂಚಿಕೆಗಾಗಿ ಜಮೀನು ಖರೀದಿ
9	ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಮೂಲಕ ಅನುಷ್ಠಾನ ಮಾಡಲಾಗುತ್ತಿರುವ ಆರ್ಥಿಕ ಅಭಿವೃದ್ಧಿ ಕಾರ್ಯಕ್ರಮಗಳು
V	ವಿವಿಧ ಸಮುದಾಯಗಳ ಅಭಿವೃದ್ಧಿ
1	ಹಿಂದುಳಿದ ವರ್ಗಗಳ ಸಮುದಾಯಗಳು ನಿರ್ಮಿಸುವ ಸಮುದಾಯ ಭವನಗಳಿಗೆ ಸಹಾಯಾನುಧಾನ
2	ಹಿಂದುಳಿದ ವರ್ಗಗಳ ಸಂಘ-ಸಂಸ್ಥೆಗಳು ನಡೆಸುವ ಖಾಸಗಿ ವಿದ್ಯಾರ್ಥಿನಿಲಯಗಳಿಗೆ ಒಂದು ಬಾರಿಯ ಅನುದಾನ
3	ದೇವರಾಜ ಅರಸು ಭವನ ನಿರ್ಮಾಣ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಯೋಜನೆಗಳ ಅನುಷ್ಠಾನಕ್ಕೆ ಇರುವ ಮಾನದಂಡಗಳ ವಿವರ

I. <u>ವಿದ್ಯಾರ್ಥಿನಿಲಯಗಳ ನಿರ್ವಹಣೆ</u>

1) ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಅನುಸರಿಸುವ ಮಾನದಂಡಗಳು

1. ವಿದ್ಯಾರ್ಥಿಗಳು ಅಂಗೀಕೃತ ಶಿಕ್ಷಣ ಸಂಸ್ಥೆಗಳಲ್ಲಿ 5ರಿಂದ 10ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರಬೇಕು.
2. ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷ ಹಾಗೂ ಪ್ರವರ್ಗ 2ಎ, 2ಬಿ, 3ಎ, 3ಬಿಯ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ ಮಿತಿ ರೂ.44,500/-ಕ್ಕೆ ನಿಗದಿಪಡಿಸಿದೆ.
3. ಶೈಕ್ಷಣಿಕ ಸಂಸ್ಥೆಯಿಂದ 5 ಕಿ.ಮೀ ದೂರದಲ್ಲಿ ವಾಸಿಸುವ ವಿದ್ಯಾರ್ಥಿಗಳಿಗೆ ಶೇಕಡಾ 90ರಷ್ಟು ಸ್ಥಾನಗಳನ್ನು ಹಾಗೂ ಉಳಿದ 10ರಷ್ಟು ಸ್ಥಾನಗಳನ್ನು 5 ಕಿ.ಮೀ.ಗಳಿಗಿಂತ ಕಡಿಮೆ ದೂರದ ಸ್ಥಳಗಳ ವಿದ್ಯಾರ್ಥಿಗಳಿಗೆ ನೀಡಲಾಗುವುದು.
4. ಪ್ರತಿ ವರ್ಷ ಜೂನ್ 1ರಂದು ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಿ, ಹಿಂದಿನ ವಾರ್ಷಿಕ ಪರೀಕ್ಷೆಯಲ್ಲಿ ಎಲ್ಲಾ ವಿಷಯಗಳಲ್ಲಿ ಉತ್ತೀರ್ಣರಾದ ನಿಲಯಾರ್ಥಿಗಳನ್ನು ಮಾತ್ರ ನವೀಕರಣ ವಿದ್ಯಾರ್ಥಿಗಳೆಂದು ಪರಿಗಣಿಸಿ ಆಯ್ಕೆ ಸಮಿತಿಯ ಅನುಮೋದನೆಗೆ ಒಳಪಟ್ಟು ನವೀಕರಣ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗುವುದು.
5. ನವೀಕರಣ ವಿದ್ಯಾರ್ಥಿಗಳ ಪ್ರವೇಶಾತಿಯ ಬಳಿಕ ಉಳಿದ ಸ್ಥಾನಗಳಿಗೆ ಆಯ್ಕೆ ಸಮಿತಿಯು ಆಯ್ಕೆ ಮಾಡಿದ ಹೊಸ ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸುವುದು.

ವಿದ್ಯಾರ್ಥಿನಿಲಯಗಳ ಪ್ರವೇಶಾತಿಗೆ ನಿಗದಿಪಡಿಸಿದ ಪ್ರವರ್ಗವಾರು ಮೀಸಲಾತಿ

1	ಪ್ರವರ್ಗ – 1	ಶೇಕಡ 10
2	ಪ್ರವರ್ಗ – 2ಎ	ಶೇಕಡ 35
3	ಪ್ರವರ್ಗ – 2ಬಿ	ಶೇಕಡ 09
4	ಪ್ರವರ್ಗ – 3ಎ	ಶೇಕಡ 09
5	ಪ್ರವರ್ಗ – 3ಬಿ	ಶೇಕಡ 12
6	ಪರಿಶಿಷ್ಟ ಜಾತಿ	ಶೇಕಡ 21
7	ಪರಿಶಿಷ್ಟ ಪಂಗಡ	ಶೇಕಡ 04
	ಒಟ್ಟು	ಶೇಕಡ 100

ಆಯ್ಕೆ ಸಮಿತಿಯ ವಿವರ

1.	ತಾಲ್ಲೂಕಿನ ಹೆಚ್ಚಿನ ಭಾಗ ಪ್ರತಿನಿಧಿಸುವ ವಿಧಾನಸಭಾ ಸದಸ್ಯರು	ಅಧ್ಯಕ್ಷರು
2.	ತಾಲ್ಲೂಕಿನ ಉಳಿದ ಭಾಗ ಪ್ರತಿನಿಧಿಸುವ ವಿಧಾನಸಭಾ ಸದಸ್ಯರು	ಸದಸ್ಯರು
3.	ಆಯಾ ಕ್ಷೇತ್ರದ ವಿಧಾನ ಪರಿಷತ್ತಿನ ಸದಸ್ಯರು	ಸದಸ್ಯರು
4.	ಸಂಬಂಧಪಟ್ಟ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು	ಸದಸ್ಯರು
5.	ಕ್ಷೇತ್ರ ಶಿಕ್ಷಣಾಧಿಕಾರಿಗಳು (ಬಿ.ಇ.ಓ)	ಸದಸ್ಯರು
6.	ಆಯಾ ತಾಲ್ಲೂಕಿನ ತಹಶೀಲ್ದಾರರು	ಸದಸ್ಯರು
7.	ಆಯಾ ತಾಲ್ಲೂಕಿನ ಸ್ಥಳೀಯ ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿಗಳು	ಸದಸ್ಯರು
8.	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯಾ ತಾಲ್ಲೂಕಿನ ವಿಸ್ತರಣಾಧಿಕಾರಿಗಳು	ಸದಸ್ಯ ಕಾರ್ಯದರ್ಶಿ

2) ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಅನುಸರಿಸುವ ಮಾನದಂಡಗಳು

1. ವಿದ್ಯಾರ್ಥಿನಿಲಯಗಳು ಇರುವ ಸ್ಥಳಗಳ ಕಾಲೇಜುಗಳಿಂದ 5 ಕಿ.ಮೀ.ಗಿಂತ ದೂರದ ಸ್ಥಳಗಳಿಂದ ಬರುವ ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶಾವಕಾಶ ಕಲ್ಪಿಸಲಾಗುವುದು. ಸ್ಥಳೀಯ ವಿದ್ಯಾರ್ಥಿಗಳು ಪ್ರವೇಶಕ್ಕೆ ಅನರ್ಹರು.
2. ಈ ವಸತಿನಿಲಯಗಳಿಗೆ ಪ್ರವೇಶ ಪಡೆಯಲು ಪ್ರವರ್ಗ–2ಎ, 2ಬಿ, 3ಎ, 3ಬಿ ವರ್ಗಗಳ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ ಮಿತಿ ರೂ.1.00 ಲಕ್ಷ ಹಾಗೂ ಪ್ರವರ್ಗ–1, ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳಿಗೆ ರೂ.2.50 ಲಕ್ಷ ನಿಗದಿಪಡಿಸಿದ್ದು, ಅರ್ಹತೆ ಮತ್ತು ಆದಾಯದ ಮಾನದಂಡದ ಮೇಲೆ ಆಯ್ಕೆ ಮಾಡಲಾಗುವುದು.
3. ವಿದ್ಯಾರ್ಥಿಗಳನ್ನು ಈ ಕೆಳಕಂಡ ಮೀಸಲಾತಿ ಅನುಪಾತದಂತೆ ಪ್ರವೇಶಕ್ಕೆ ಆಯ್ಕೆ ಮಾಡಲಾಗುವುದು.

1	ಪ್ರವರ್ಗ – 1	ಶೇಕಡ 10
2	ಪ್ರವರ್ಗ – 2ಎ	ಶೇಕಡ 35
3	ಪ್ರವರ್ಗ – 2ಬಿ	ಶೇಕಡ 09
4	ಪ್ರವರ್ಗ – 3ಎ	ಶೇಕಡ 09
5	ಪ್ರವರ್ಗ – 3ಬಿ	ಶೇಕಡ 12
6	ಪರಿಶಿಷ್ಟ ಜಾತಿ	ಶೇಕಡ 21
7	ಪರಿಶಿಷ್ಟ ಪಂಗಡ	ಶೇಕಡ 04
	ಒಟ್ಟು	ಶೇಕಡ 100

4. ಸರ್ಕಾರಿ ಸುತ್ತೋಲೆ ಸಂಖ್ಯೆ ಸಕಇ 53 ಬಿಎಂಎಸ್ 2009 ದಿ:26.2.2009ರಲ್ಲಿ ವಿದ್ಯಾರ್ಥಿ ನಿಲಯಗಳಲ್ಲಿ ಲಭ್ಯವಿರುವ ಖಾಲಿ ಸ್ಥಾನಗಳಲ್ಲಿ ಶೇಕಡ 20ರಷ್ಟು ಸ್ಥಾನಗಳನ್ನು ಸ್ವಾತಂತ್ರ್ಯ ಹೋರಾಟಗಾರರ ಮಕ್ಕಳು, ಮಾಜಿ ಸೈನಿಕರ ಮಕ್ಕಳು, ವಿಧವೆಯರ ಮಕ್ಕಳು, ದೇವದಾಸಿಯರ ಮಕ್ಕಳು, ಅಂಗವಿಕಲ ಮಕ್ಕಳು, ತಂದೆ ಹಾಗೂ ತಾಯಿ ಇಲ್ಲದ ಅನಾಥ ಮಕ್ಕಳು, ಪ್ರಮಾಣೀಕೃತ ಬಾಲಕಾರ್ಮಿಕರು, ಯೋಜನಾ ನಿರ್ವಸಿತ ಪೋಷಕರ ಮಕ್ಕಳು, ದೌರ್ಜನ್ಯದಲ್ಲಿ ಮೃತಪಟ್ಟ / ಶಾಶ್ವತ ಅಂಗವಿಕಲ ಪೋಷಕರ ಮಕ್ಕಳು, ಅಪಘಾತದಲ್ಲಿ ಮೃತಪಟ್ಟ/ಶಾಶ್ವತ ಅಂಗವಿಕಲರಾಗಿರುವ ಪೋಷಕರ ಮಕ್ಕಳು, ಆದಿವಾಸಿ ಪಂಗಡದ (ಜೇನು ಕುರುಬ ಹಾಗೂ ಕೊರಗ ಸಮಾಜ) ಮಕ್ಕಳು, ಅಲೆಮಾರಿ ಜನಾಂಗದ ಮಕ್ಕಳು, ಭಿಕ್ಷುಕರ ಮಕ್ಕಳು, ಸಫಾಯಿ ಕರ್ಮಚಾರಿ ಮಕ್ಕಳಿಗೆ ಮೀಸಲಿರಿಸಲಾಗಿದೆ.

ತಾಲ್ಲೂಕು ಮಟ್ಟದ ಆಯ್ಕೆ ಸಮಿತಿಯ ವಿವರ

1.	ತಾಲ್ಲೂಕಿನ ಹೆಚ್ಚಿನ ಭಾಗ ಪ್ರತಿನಿಧಿಸುವ ವಿಧಾನ ಸಭಾ ಸದಸ್ಯರು	ಅಧ್ಯಕ್ಷರು
2.	ತಾಲ್ಲೂಕಿನ ಉಳಿದ ಭಾಗ ಪ್ರತಿನಿಧಿಸುವ ವಿಧಾನ ಸಭಾ ಸದಸ್ಯರು	ಸದಸ್ಯರು
3.	ಆಯಾ ಕ್ಷೇತ್ರದ ವಿಧಾನ ಪರಿಷತ್ತಿನ ಸದಸ್ಯರು	ಸದಸ್ಯರು
4.	ಸಂಬಂಧ ಪಟ್ಟ ತಾಲ್ಲೂಕ್ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು	ಸದಸ್ಯರು
5.	ಕ್ಷೇತ್ರ ಶಿಕ್ಷಣಾಧಿಕಾರಿಗಳು (ಬಿ.ಇ.ಓ)	ಸದಸ್ಯರು
6.	ಆಯಾ ತಾಲ್ಲೂಕಿನ ತಹಶೀಲ್ದಾರರು	ಸದಸ್ಯರು
7.	ಆಯಾ ತಾಲ್ಲೂಕಿನ ಸ್ಥಳೀಯ ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿಗಳು	ಸದಸ್ಯರು
8.	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯಾ ತಾಲ್ಲೂಕಿನ ವಿಸ್ತರಣಾಧಿಕಾರಿಗಳು	ಸದಸ್ಯ ಕಾರ್ಯದರ್ಶಿ

3) ಆಶ್ರಮಶಾಲೆಗಳ ಪ್ರವೇಶಕ್ಕಾಗಿ ಅನುಸರಿಸುವ ಮಾನದಂಡಗಳ ವಿವರ

1. ವಿದ್ಯಾರ್ಥಿಗಳನ್ನು ಪ್ರವೇಶಕ್ಕೆ ಆಯ್ಕೆ ಮಾಡುವಾಗ ಮಂಜೂರಾತಿ ಸಂಖ್ಯೆಯ ಶೇಕಡ 75 ರಷ್ಟನ್ನು ಪ್ರವರ್ಗ-1ಕ್ಕೆ ಸೇರಿದ ವಿದ್ಯಾರ್ಥಿಗಳನ್ನು ಹಾಗೂ ಶೇಕಡ 25 ರಷ್ಟನ್ನು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಬೇಕು.
2. ಪ್ರವರ್ಗ-1ಕ್ಕೆ ಸೇರಿದ ವಿದ್ಯಾರ್ಥಿಗಳು ಸಾಕಷ್ಟು ಸಂಖ್ಯೆಯಲ್ಲಿ ದೊರೆಯದಿದ್ದಲ್ಲಿ, ಮೀಸಲಾತಿ ಪ್ರಮಾಣವು ಈ ಕೆಳಕಂಡಂತಿರಬೇಕು.

1	ಪ್ರವರ್ಗ – 2ಎ	ಶೇಕಡ 54
2	ಪ್ರವರ್ಗ – 2ಬಿ	ಶೇಕಡ 14
3	ಪ್ರವರ್ಗ – 3ಎ	ಶೇಕಡ 14
4	ಪ್ರವರ್ಗ – 3ಬಿ	ಶೇಕಡ 18
	ಒಟ್ಟು	ಶೇಕಡ 100

3. ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷ ಹಾಗೂ ಪ್ರವರ್ಗ 2ಎ, 2ಬಿ, 3ಎ, 3ಬಿ ಸೇರಿದ ವಿದ್ಯಾರ್ಥಿಗಳಿಗೆ ರೂ.44,500/- ಗಳ ವಾರ್ಷಿಕ ಆದಾಯ ಮಿತಿಯನ್ನು ನಿಗದಿಪಡಿಸಲಾಗಿದೆ.

4) ಖಾಸಗಿ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು:

ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ.1000/- ರಂತೆ 10 ತಿಂಗಳ ಅವಧಿಗೆ ಆಹಾರ ವೆಚ್ಚ ನೀಡಲಾಗುವುದು. ವಿದ್ಯಾರ್ಥಿನಿಲಯಗಳಲ್ಲಿ ಚಾಲ್ತಿಯಲ್ಲಿರುವ ನಿಯಮಾನುಸಾರ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸತಕ್ಕದ್ದು.

1	ಪ್ರವರ್ಗ – 1	ಶೇಕಡ 10
2	ಪ್ರವರ್ಗ – 2ಎ	ಶೇಕಡ 35
3	ಪ್ರವರ್ಗ – 2ಬಿ	ಶೇಕಡ 09
4	ಪ್ರವರ್ಗ – 3ಎ	ಶೇಕಡ 09
5	ಪ್ರವರ್ಗ – 3ಬಿ	ಶೇಕಡ 12
6	ಪರಿಶಿಷ್ಟ ಜಾತಿ	ಶೇಕಡ 21
7	ಪರಿಶಿಷ್ಟ ಪಂಗಡ	ಶೇಕಡ 04
	ಒಟ್ಟು	ಶೇಕಡ 100

ನಿಬಂಧನೆಗಳು:

1. ಪ್ರವರ್ಗ–1 ರ ವಿದ್ಯಾರ್ಥಿಗಳಿಗೆ ರೂ.1.00ಲಕ್ಷ ಹಾಗೂ ಪ್ರವರ್ಗ–2ಎ, 2ಬಿ, 3ಎ, ಮತ್ತು 3ಬಿ ವಿದ್ಯಾರ್ಥಿಗಳಿಗೆ ರೂ.44,500/- ಗಳ ಆದಾಯಮಿತಿ ನಿಗದಿಪಡಿಸಿದೆ.
2. 5 ರಿಂದ 10ನೇ ತರಗತಿವರೆಗಿನ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ
3. ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ.1000/- ರಂತೆ 10 ತಿಂಗಳ ಅವಧಿಗೆ ಆಹಾರ ವೆಚ್ಚ ನೀಡಲಾಗುವುದು.

5) ಖಾಸಗಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು:

ವಿದ್ಯಾರ್ಥಿನಿಲಯಗಳಲ್ಲಿ ಚಾಲ್ತಿಯಲ್ಲಿರುವ ನಿಯಮಾನುಸಾರ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸತಕ್ಕದ್ದು.

1	ಪ್ರವರ್ಗ– 1	ಶೇಕಡ 20
2	ಪ್ರವರ್ಗ – 2ಎ	ಶೇಕಡ 25
3	ಪ್ರವರ್ಗ – 2ಬಿ	ಶೇಕಡ 20
4	ಪ್ರವರ್ಗ – 3ಎ	ಶೇಕಡ 20
5	ಪ್ರವರ್ಗ – 3ಬಿ	ಶೇಕಡ 15
ಒಟ್ಟು		ಶೇಕಡ 100

ನಿಬಂಧನೆಗಳು:

1. ಪ್ರವರ್ಗ–1 ರ ವಿದ್ಯಾರ್ಥಿಗಳಿಗೆ ರೂ.2.50 ಲಕ್ಷ ಹಾಗೂ ಪ್ರವರ್ಗ–2ಎ, 2ಬಿ, 3ಎ, ಮತ್ತು 3ಬಿ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷ ಆದಾಯಮಿತಿ ನಿಗದಿಪಡಿಸಿದೆ.
2. ಪದವಿ ಪೂರ್ವ ಕೋರ್ಸಿನಿಂದ ಸ್ನಾತಕೋತ್ತರ ಪದವಿಗಳವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ
3. ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ.1100/- ರಂತೆ 10 ತಿಂಗಳ ಅವಧಿಗೆ ಆಹಾರ ವೆಚ್ಚ ನೀಡಲಾಗುವುದು.

6) ಖಾಸಗಿ ಅನುದಾನಿತ ಅನಾಥಾಲಯಗಳು:

1. ಅನಾಥ ವಿದ್ಯಾರ್ಥಿಗಳಿಗೆ ಆದಾಯಮಿತಿ ಇರುವುದಿಲ್ಲ.
2. ನಿರ್ಗತಿಕ ವಿದ್ಯಾರ್ಥಿಗಳು ವಾರ್ಷಿಕ ಆದಾಯಮಿತಿ– ಪ್ರವರ್ಗ–1 ರೂ.1.00 ಲಕ್ಷ, ಪ್ರವರ್ಗ–2ಎ, 2ಬಿ, 3ಎ, ಮತ್ತು 3ಬಿ – ರೂ.44,500/- ನಿಗದಿಪಡಿಸಿದೆ.
3. 1 ರಿಂದ 10ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ನಿರ್ಗತಿಕ ಹಾಗೂ ಅನಾಥ ಮಕ್ಕಳು ಸೌಲಭ್ಯಕ್ಕೆ ಅರ್ಹರು.

7) ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ:

ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ 2438 ಮೆಟ್ರಿಕ್–ಪೂರ್ವ/ಮೆಟ್ರಿಕ್–ನಂತರದ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ಪೈಕಿ 1325 ವಿದ್ಯಾರ್ಥಿ ನಿಲಯಗಳು ಸ್ವಂತ

ಕಟ್ಟಡಗಳನ್ನು ಹೊಂದಿರುತ್ತವೆ. ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡವನ್ನು ನಿರ್ಮಿಸುವ ಸಂಬಂಧ ನಿವೇಶನಗಳನ್ನು ಪಡೆಯಲಾಗುತ್ತಿದ್ದು, ಖಾಲಿ ಇರುವ ನಿವೇಶನಗಳಲ್ಲಿ ಸ್ವಂತ ಕಟ್ಟಡವನ್ನು ಅನುದಾನದ ಲಭ್ಯತೆಯ ಅನುಸಾರ ಹಂತ ಹಂತವಾಗಿ ವಿವಿಧ ಏಜೆನ್ಸಿಗಳ ಮೂಲಕ ನಿರ್ಮಾಣ ಮಾಡಲಾಗುತ್ತಿದೆ. ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳಿಗೆ ವಾರ್ಷಿಕ ದುರಸ್ತಿ, ಸುಣ್ಣ-ಬಣ್ಣ, ಹೆಚ್ಚುವರಿ ಕೊಠಡಿ ನಿರ್ಮಾಣ ಇತ್ಯಾದಿ ಕಾಮಗಾರಿಗಳನ್ನು ಜಿಲ್ಲಾ ವಲಯದ ಕಟ್ಟಡಗಳ ನಿರ್ವಹಣೆ ಮತ್ತು ದುರಸ್ತಿ ಕಾರ್ಯಕ್ರಮದಡಿ ಮಾಡಲಾಗುತ್ತಿದೆ. ಉತ್ತಮ ಸೌಕರ್ಯಗಳನ್ನು ನಿರಂತರವಾಗಿ ನೀಡುವ ಹಾಗೂ ಕಟ್ಟಡಗಳನ್ನು ಉತ್ತಮ ಸ್ಥಿತಿಯಲ್ಲಿ ಇಟ್ಟಿರಲು ಅನುಕೂಲವಾಗುವಂತೆ ದುರಸ್ತಿ ಕಾರ್ಯವನ್ನು ಕೈಗೊಳ್ಳಲಾಗುವುದು.

III. ವಿದ್ಯಾರ್ಥಿವೇತನ ಕಾರ್ಯಕ್ರಮಗಳು

1) ಮೆಟ್ರಿಕ್-ಪೂರ್ವ ವಿದ್ಯಾರ್ಥಿವೇತನ:

1. ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿಗೆ ಸೇರಿದವರಾಗಿರಬೇಕು.
2. ವಾರ್ಷಿಕ ಆದಾಯಮಿತಿ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷ, ಪ್ರವರ್ಗ-2ಎ, 3ಎ, ಮತ್ತು 3ಬಿ ವಿದ್ಯಾರ್ಥಿಗಳಿಗೆ - ರೂ.44,500/- ನಿಗದಿಪಡಿಸಿದೆ. ಕೇಂದ್ರ ಪುರಸ್ಕೃತ ವಿದ್ಯಾರ್ಥಿವೇತನಕ್ಕೆ ವಾರ್ಷಿಕ ರೂ.2.50 ಲಕ್ಷ ಆದಾಯಮಿತಿ.
3. ಸರ್ಕಾರದ/ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ /ಅನುದಾನರಹಿತ ಶಾಲೆಗಳಲ್ಲಿ ವ್ಯಾಸಂಗ ಮಾಡುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಅರ್ಹರು.
4. ಸರ್ಕಾರದ/ಸರ್ಕಾರದ ಅನುದಾನಿತ ವಿದ್ಯಾರ್ಥಿನಿಲಯಗಳಲ್ಲಿ/ವಸತಿಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುವುದಿಲ್ಲ.
5. ಹಿಂದಿನ ತರಗತಿಯಲ್ಲಿ ಶೇ.75 ಕ್ಕಿಂತ ಹೆಚ್ಚು ಹಾಜರಾತಿ ಹೊಂದಿದವರು ಮಾತ್ರ ಅರ್ಹರು.
6. ಹಿಂದಿನ ತರಗತಿಯಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳು, ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುವುದಿಲ್ಲ.

ಆಯ್ಕೆ ವಿಧಾನ:

1. ಕೇಂದ್ರ ಪುರಸ್ಕೃತ ಅನುದಾನವನ್ನು ಅತ್ಯಂತ ಕಡಿಮೆ ಆದಾಯ ಮತ್ತು ಮೆರಿಟ್ ಇರುವ ವಿದ್ಯಾರ್ಥಿಗಳಿಗೆ ಅನುದಾನದ ಲಭ್ಯತೆಗೊಳಪಟ್ಟು ಮಂಜೂರು ಮಾಡಲಾಗುವುದು. ನಂತರ ಉಳಿದ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರದ ಮೆಟ್ರಿಕ್-ಪೂರ್ವ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುವುದು.
2. ಮೊದಲನೇ ಆದ್ಯತೆ: ಎಲ್ಲಾ ಅರ್ಹ ನವೀಕರಣ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡುವುದು.
3. ಎರಡನೇ ಆದ್ಯತೆ: ಹಿಂದುಳಿದ ವರ್ಗಗಳ ಪ್ರವರ್ಗ-1ರ ಎಲ್ಲಾ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಮಂಜೂರು ಮಾಡುವುದು.
4. ಮೂರನೇ ಆದ್ಯತೆ: ಉಳಿದ ಮೊತ್ತವನ್ನು ಅರ್ಹವಿರುವ ಪ್ರವರ್ಗ-2ಎ, 3ಎ, 3ಬಿ ಮತ್ತು ಇತರೆ ಹಿಂದುಳಿದ ವರ್ಗಗಳ (ಕೇಂದ್ರ/ರಾಜ್ಯ ಸರ್ಕಾರದ ಹಿಂದುಳಿದ ವರ್ಗದ ಪಟ್ಟಿಯಲ್ಲಿ ಇರುವ ಜಾತಿಗಳು ಮಾತ್ರ) ವಿದ್ಯಾರ್ಥಿಗಳಿಗೆ ಆದಾಯ ಮತ್ತು ಅರ್ಹತೆಯ ಆಧಾರದ ಮೇಲೆ ಈ ಕೆಳಕಂಡ ಪ್ರಮಾಣದಂತೆ ಮಂಜೂರು ಮಾಡಲಾಗುವುದು.

1	ಪ್ರವರ್ಗ - 2ಎ	ಶೇಕಡ 61
2	ಪ್ರವರ್ಗ - 3ಎ	ಶೇಕಡ 17
3	ಪ್ರವರ್ಗ - 3ಬಿ	ಶೇಕಡ 21
4	ಇತರೆ ಹಿಂದುಳಿದ ವರ್ಗ	ಶೇಕಡ 01
ಒಟ್ಟು		ಶೇಕಡ 100

2) ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ

1. ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು ಹಾಗೂ ಭಾರತ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಧಿಸೂಚಿಸಿರುವ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿರಬೇಕು.
2. ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳ ಅಧೀನಕ್ಕೆ ಒಳಪಡುವ ಸರ್ಕಾರಿ/ಸ್ಥಳೀಯ ಸಂಸ್ಥೆ/ಅನುದಾನಿತ ಸಂಸ್ಥೆ/ಮಾನ್ಯತೆ ಪಡೆದ ಅನುದಾನರಹಿತ ಖಾಸಗಿ ಸಂಸ್ಥೆಗಳಲ್ಲಿ ಮೆಟ್ರಿಕ್-ನಂತರದ ಶಿಕ್ಷಣವನ್ನು ಪಡೆಯುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.
3. ಸರ್ಕಾರದ ವಿದ್ಯಾರ್ಥಿನಿಲಯಗಳಲ್ಲಿ/ವಸತಿ ಕಾಲೇಜುಗಳಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳು ಮೆಟ್ರಿಕ್-ನಂತರದ ವಿದ್ಯಾರ್ಥಿವೇತನವನ್ನು ಪಡೆಯಲು ಅರ್ಹರಿರುವುದಿಲ್ಲ.
4. ವಾರ್ಷಿಕ ಆದಾಯಮಿತಿ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ರೂ.2.50 ಲಕ್ಷ, ಪ್ರವರ್ಗ-2ಎ, 3ಎ, ಮತ್ತು 3ಬಿ ವಿದ್ಯಾರ್ಥಿಗಳಿಗೆ - ರೂ.1.00 ಲಕ್ಷ ನಿಗದಿಪಡಿಸಿದೆ.
5. ಹೊಸ ಮತ್ತು ನವೀಕರಣ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನಕ್ಕಾಗಿ ಹಿಂದಿನ ತರಗತಿಗಳಲ್ಲಿ ನಿಗದಿಪಡಿಸಿರುವ ಕನಿಷ್ಠ ಅಂಕ

ಕ್ರ ಸಂ.	ಪ್ರವರ್ಗ	ಹೊಸ	ನವೀಕರಣ
1	ಪ್ರವರ್ಗ-1	40%	50%
2	ಪ್ರವರ್ಗ-2ಎ, 3ಎ ಮತ್ತು 3ಬಿ	50%	60%

6. ಸಮಾನ ಕೋರ್ಸುಗಳಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ವ್ಯಾಸಂಗ ಮಾಡುತ್ತಿದ್ದಲ್ಲಿ, ವಿದ್ಯಾರ್ಥಿವೇತನಕ್ಕೆ ಅರ್ಹರಿರುವುದಿಲ್ಲ.
7. ಒಂದೇ ಕುಟುಂಬದ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.
8. ವಿವಿಧ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮೆಟ್ರಿಕ್-ನಂತರದ ವಿದ್ಯಾರ್ಥಿಗಳಿಗೆ ಕೋರ್ಸಿನ ಗುಂಪುವಾರು ಪ್ರತಿ ತಿಂಗಳಿಗೆ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನವನ್ನು 10 ತಿಂಗಳ ಅವಧಿಗೆ ಅರ್ಹತೆ ಮತ್ತು ಆದಾಯಮಿತಿಯನ್ನು ಪರಿಗಣಿಸಿ, ಮಂಜೂರು ಮಾಡಲಾಗುವುದು.

ಅನುದಾನದ ಹಂಚಿಕೆ ವಿಧಾನ:

ಆಯಾ ಆರ್ಥಿಕ ವರ್ಷಕ್ಕೆ ಲಭ್ಯವಾಗುವ ಅನುದಾನವನ್ನು ಪ್ರವರ್ಗವಾರು ಈ ಕೆಳಗಿನಂತೆ ಶೇಕಡವಾರು ಹಂಚಿಕೆ ಮಾಡಲಾಗುವುದು.

1	ಪ್ರವರ್ಗ-1	15%
2	ಪ್ರವರ್ಗ - 2ಎ	52%
3	ಪ್ರವರ್ಗ - 3ಎ	14%
4	ಪ್ರವರ್ಗ - 3ಬಿ	18%
5	ಇತರೆ ಹಿಂದುಳಿದ ವರ್ಗ	01%
ಒಟ್ಟು		100%

3) ವಿದ್ಯಾಸಿರಿ- ಊಟ ಮತ್ತು ವಸತಿ ಸಹಾಯ ಯೋಜನೆ

1. ಅ) ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿ ಆಗಿರಬೇಕು.

ಆ) ಭಾರತ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಧಿಸೂಚಿಸಿರುವ, ಇತರೆ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿರಬೇಕು.

ಇ) ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳ ಅಧೀನಕ್ಕೆ ಒಳಪಡುವ, ಸರ್ಕಾರಿ / ಸ್ಥಳೀಯ ಸಂಸ್ಥೆ/ ಅನುದಾನಿತ ಸಂಸ್ಥೆಗಳು / ಮಾನ್ಯತೆ ಪಡೆದ ಅನುದಾನ ರಹಿತ ಖಾಸಗಿ ಸಂಸ್ಥೆಗಳಲ್ಲಿ - ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಾಗಿರಬೇಕು.

2. ಅ) ಈ ಮೇಲಿನ ಸೌಲಭ್ಯ ಪಡೆಯಲು ವಿದ್ಯಾರ್ಥಿಯ, ತಂದೆ-ತಾಯಿ/ಪೋಷಕರ ಕುಟುಂಬದ, ಒಟ್ಟು ವಾರ್ಷಿಕ ವರಮಾನ (Gross Annual Income) ಈ ಕೆಳಗೆ ನಿಗದಿಪಡಿಸಿದ ಮಿತಿಯೊಳಗೆ ಇರಬೇಕು.

(i) ಪ್ರವರ್ಗ-1 ರ ವಿದ್ಯಾರ್ಥಿಗಳಿಗೆ ರೂ.2.50 ಲಕ್ಷ

(ii) ಪ್ರವರ್ಗ-2ಎ, 3ಎ ಮತ್ತು 3ಬಿ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷ

ಆ) ವಿದ್ಯಾರ್ಥಿಗಳು ಗ್ರಾಮೀಣ ಪ್ರದೇಶದವಾಗಿರಬೇಕು ಹಾಗೂ ವ್ಯಾಸಂಗ ಮಾಡುವ ಕಾಲೇಜಿನಿಂದ ಕನಿಷ್ಠ 5 ಕಿ.ಮೀ. ದೂರದವರಾಗಿರಬೇಕು. ಆದರೆ, ವಿದ್ಯಾರ್ಥಿಯ ಸ್ವಂತ ಸ್ಥಳ, ನಗರ/ಪಟ್ಟಣ ಆಗಿದ್ದು, ಅವರು ಬೇರೆ ನಗರ/ಪಟ್ಟಣದಲ್ಲಿ ಇರುವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಈ ಸೌಲಭ್ಯಕ್ಕೆ ಅರ್ಹರಿರುತ್ತಾರೆ.

ಇ) ಹೊಸ ಮತ್ತು ನವೀಕರಣ ವಿದ್ಯಾರ್ಥಿಗಳು ಈ ಸೌಲಭ್ಯ ಪಡೆಯಲು ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಈ ಕೆಳಗಿನಂತೆ ಕನಿಷ್ಠ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.

ಕ್ರ. ಸಂ.	ಪ್ರವರ್ಗ	ಹೊಸ	ನವೀಕರಣ
1	ಪ್ರವರ್ಗ-1	40%	50%
2	ಪ್ರವರ್ಗ-2ಎ, 3ಎ ಮತ್ತು 3ಬಿ	50%	60%

(ಒಂದು ವೇಳೆ, ವೈದ್ಯಕೀಯ ಕಾರಣಗಳಿಂದಾಗಿ ಪರೀಕ್ಷೆಗೆ ಹಾಜರಾಗಲು ಸಾಧ್ಯವಾಗದಿದ್ದಲ್ಲಿ, ಅಂತಹವರು, ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರ ಪಡೆದು ಸಲ್ಲಿಸಬೇಕು.)

3. ಅ) ಸಮಾನ ಕೋರ್ಸುಗಳಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಅರ್ಹರಿರುವುದಿಲ್ಲ. (ಉದಾ: ಬಿ.ಎ ನಂತರ ಬಿ.ಕಾಂ, ಎಂ.ಎ (ಕನ್ನಡ) ನಂತರ ಎಂ.ಎ (ಇಂಗ್ಲೀಷ್), ಬಿ.ಎಡ್ ನಂತರ ಎಲ್.ಎಲ್.ಬಿ, ಇತ್ಯಾದಿಗಳಿಗೆ ಪ್ರವೇಶ ಪಡೆದಿದ್ದಲ್ಲಿ)

ಆ) ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು, ಕೋರ್ಸಿನ ಅವಧಿಯಲ್ಲಿ ಮೆಡಿಕಲ್ ಪ್ರಾಕ್ಟೀಸ್ ಮಾಡುತ್ತಿದ್ದಲ್ಲಿ, ಈ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.

ಇ) ಕಲೆ, ವಿಜ್ಞಾನ, ಹಾಗೂ ವಾಣಿಜ್ಯ ಕೋರ್ಸುಗಳ, ಪದವಿ ಅಥವಾ ಸ್ನಾತಕೋತ್ತರ ಪದವಿಗಳಲ್ಲಿ ಉತ್ತೀರ್ಣ / ಅನುತ್ತೀರ್ಣರಾದವರು ಅಂಗೀಕೃತ ವೃತ್ತಿಪರ ಅಥವಾ ತಾಂತ್ರಿಕ ಸರ್ಟಿಫಿಕೇಟ್, ಡಿಪ್ಲೋಮ, ಪದವಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡಿದ್ದಲ್ಲಿ, ಹಾಗೂ ಇತರೆ ರೀತಿ ಅರ್ಹರಿದ್ದಲ್ಲಿ ಅವರು ಈ ಯೋಜನೆಯ ಅಡಿ ಸೌಲಭ್ಯಗಳಿಗೆ ಅರ್ಹರಿರುತ್ತಾರೆ. ಒಂದಕ್ಕಿಂತ ಹೆಚ್ಚು ಬಾರಿ ಕೋರ್ಸುಗಳ ಬದಲಾವಣೆ ಮಾಡಿಕೊಂಡವರು ಅರ್ಹರಿರುವುದಿಲ್ಲ.

ಈ) ಒಂದೇ ಕುಟುಂಬದ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಆದರೆ, ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.

4) ಶುಲ್ಕ ವಿನಾಯಿತಿ

1. ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು ಹಾಗೂ ಭಾರತ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಧಿಸೂಚಿಸಿರುವ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿರಬೇಕು.
2. ಕರ್ನಾಟಕದ ಶಾಸನಬದ್ಧ ವಿಶ್ವ ವಿದ್ಯಾಲಯಗಳ ಅಧೀನಕ್ಕೆ ಒಳಪಡುವ ಸರ್ಕಾರಿ / ಸ್ಥಳೀಯ ಸಂಸ್ಥೆ/ ಅನುದಾನಿತ ಸಂಸ್ಥೆ / ಮಾನ್ಯತೆ ಪಡೆದ ಅನುದಾನರಹಿತ ಖಾಸಗಿ ಸಂಸ್ಥೆಗಳಲ್ಲಿ ಮೆಟ್ರಿಕ್-ನಂತರದ ಶಿಕ್ಷಣವನ್ನು ಪಡೆಯುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.

3. ಈ ಸೌಲಭ್ಯವನ್ನು ಪಡೆಯಲು ವಿದ್ಯಾರ್ಥಿಯ ತಂದೆ-ತಾಯಿ/ಪೋಷಕರ ಕುಟುಂಬದ ವಾರ್ಷಿಕ ವರಮಾನ ಈ ಕೆಳಗೆ ನಿಗದಿಪಡಿಸಿದ ಗರಿಷ್ಠ ಮಿತಿಯೊಳಗೆ ಇರಬೇಕು.
   - ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ರೂ.2.50 ಲಕ್ಷ ಹಾಗೂ
   - ಭಾರತ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಧಿಸೂಚಿಸಿರುವ ಇತರೆ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿದ ಮತ್ತು ಎಲ್ಲಾ ಧರ್ಮಗಳ, ಜಾತಿಗಳ ಹಾಗೂ ಸಮುದಾಯಗಳ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷ
   - ಆದರೆ, ಸಮಾಜ ಕಲ್ಯಾಣ/ ಪರಿಶಿಷ್ಟ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ವ್ಯಾಪ್ತಿಗೆ ಬರುವ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸೌಲಭ್ಯಗಳನ್ನು ಪಡೆಯಲು ಅರ್ಹರಿರುವುದಿಲ್ಲ.

4. ಅ) ಸಮಾನ ಕೋರ್ಸುಗಳಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಅರ್ಹರಿರುವುದಿಲ್ಲ.

   ಆ) ಸ್ನಾತಕೋತ್ತರ, ವೈದ್ಯಕೀಯ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು ಕೋರ್ಸಿನ ಅವಧಿಯಲ್ಲಿ ಮೆಡಿಕಲ್ ಪ್ರಾಕ್ಟೀಸ್ ಮಾಡುತ್ತಿದ್ದಲ್ಲಿ, ಈ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.

   ಇ) ಕಲೆ, ವಿಜ್ಞಾನ ಹಾಗೂ ವಾಣಿಜ್ಯ ಕೋರ್ಸುಗಳ, ಪದವಿ ಅಥವಾ ಸ್ನಾತಕೋತ್ತರ ಪದವಿಗಳಲ್ಲಿ ಉತ್ತೀರ್ಣ / ಅನುತ್ತೀರ್ಣರಾದವರು ಅಂಗೀಕೃತ ವೃತ್ತಿಪರ ಅಥವಾ ತಾಂತ್ರಿಕ ಸರ್ಟಿಫಿಕೇಟ್, ಡಿಪ್ಲೋಮಾ, ಪದವಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಹಾಗೂ ಇತರೆ ರೀತಿ ಅರ್ಹರಿದ್ದಲ್ಲಿ ಅವರು ಈ ಯೋಜನೆಯ ಅಡಿ ಸೌಲಭ್ಯಗಳಿಗೆ ಅರ್ಹರಿರುತ್ತಾರೆ. ಒಂದಕ್ಕಿಂತ ಹೆಚ್ಚು ಬಾರಿ ಕೋರ್ಸುಗಳ ಬದಲಾವಣೆ ಮಾಡಿಕೊಂಡವರು ಅರ್ಹರಿರುವುದಿಲ್ಲ.

   ಈ) ಒಂದೇ ಕುಟುಂಬದ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಆದರೆ, ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.

ಅ) ಶುಲ್ಕ ವಿನಾಯಿತಿಗೆ ಅರ್ಹ ಇರುವ ಶುಲ್ಕಗಳು:

ರಾಜ್ಯಮಟ್ಟದ ಸಮಿತಿಯು ನಿಗದಿಪಡಿಸುವ ದರಗಳಂತೆ ಈ ಕೆಳಗಿನ ಐದು ಶುಲ್ಕಗಳಿಗೆ ಮಾತ್ರ ವಿನಾಯಿತಿ ನೀಡಲಾಗುವುದು.

ಅ) ಬೋಧನಾ ಶುಲ್ಕ
ಆ) ಪ್ರಯೋಗಾಲಯ ಶುಲ್ಕ (ಯಾವ ಕೋರ್ಸುಗಳಲ್ಲಿ ಪ್ರಯೋಗಾಲಯ ಕಡ್ಡಾಯವಿದೆಯೋ ಆ ಕೋರ್ಸುಗಳಿಗೆ ಮಾತ್ರ)
ಇ) ಪರೀಕ್ಷಾ ಶುಲ್ಕ
ಈ) ಕ್ರೀಡಾ ಶುಲ್ಕ
ಉ) ಗ್ರಂಥಾಲಯ ಶುಲ್ಕ

5) ಪಿಹೆಚ್.ಡಿ ಪೂರ್ಣಾವಧಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಫೆಲೋಶಿಪ್

1. ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು.
2. ಕರ್ನಾಟಕ ಸರ್ಕಾರ ಅಧಿಸೂಚಿಸಿರುವ ಹಿಂದುಳಿದ ವರ್ಗಗಳ ಪಟ್ಟಿಗೆ ಸೇರಿರಬೇಕು.
3. ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳಲ್ಲಿ/ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪೂರ್ಣಾವಧಿ (Full Time) ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರಬೇಕು.
4. ಈ ಸೌಲಭ್ಯವನ್ನು ಪಡೆಯಬಯಸುವ ಅಭ್ಯರ್ಥಿಯು ಭಾರತ ಸರ್ಕಾರ / ಕರ್ನಾಟಕ ಸರ್ಕಾರ / ವಿಶ್ವವಿದ್ಯಾಲಯ ಅಥವಾ ಇತರೆ ಯಾವುದೇ ಸಂಸ್ಥೆಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ಗೆ ಆಯ್ಕೆಯಾಗಿರಬಾರದು.

ಶೈಕ್ಷಣಿಕ ಅರ್ಹತೆ

1. ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಠ ಶೇ.55 ಅಂಕಗಳನ್ನು ಪಡೆದಿರಬೇಕು.
2. ವಿಶ್ವವಿದ್ಯಾಲಯ/ಅಧಿಕೃತ ಸಂಸ್ಥೆಗಳಲ್ಲಿನ ಸಂಶೋಧನಾ ಮಾರ್ಗದರ್ಶಕರಡಿಯಲ್ಲಿ ಪಿಎಚ್.ಡಿ ಅಧ್ಯಯನಕ್ಕಾಗಿ ನೋಂದಣಿ ಮಾಡಿಕೊಂಡಿರಬೇಕು.

3. ಈ ನೋಂದಣಿಯು ವ್ಯಾಸಂಗ ವೇತನ/ಫೆಲೋಶಿಪ್‌ಗಾಗಿ ಅರ್ಜಿ ಸಲ್ಲಿಸುವ ದಿನಾಂಕಕ್ಕೆ ಹಿಂದಿನ 2 ವರ್ಷಗಳೊಳಗಿದ್ದು, ಅರ್ಜಿ ಸಲ್ಲಿಸುವ ಸಾಲಿನಿಂದ ಪ್ರಥಮ ವರ್ಷದ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರಬೇಕು.

ವಯೋಮಿತಿ: ಅಭ್ಯರ್ಥಿಯ ಗರಿಷ್ಠ ವಯೋಮಿತಿ 35 ವರ್ಷಗಳು.

ಕುಟುಂಬದ ಒಟ್ಟು ವಾರ್ಷಿಕ ಆದಾಯಮಿತಿ

ಪ್ರವರ್ಗ-1 – ರೂ.4.50 ಲಕ್ಷ.

ಪ್ರವರ್ಗ-2(ಎ), 3(ಎ) ಮತ್ತು 3(ಬಿ) – ರೂ.3.50 ಲಕ್ಷ.

1. ಕೇಂದ್ರ / ರಾಜ್ಯ ಸರ್ಕಾರಿ / ಅನುದಾನಿತ ಸಂಸ್ಥೆ / ಸಾರ್ವಜನಿಕ ಸ್ವಾಮ್ಯತೆಗೆ ಒಳಪಟ್ಟ ಸಂಸ್ಥೆಗಳ ಉದ್ಯೋಗಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಲ್ಲ.
2. ಒಂದೇ ಕುಟುಂಬದ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಆದರೆ ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.
3. ಒಬ್ಬ ಅಭ್ಯರ್ಥಿಗೆ ಒಂದು ಬಾರಿ ಮಾತ್ರ ಪಿಎಚ್.ಡಿ ಅಧ್ಯಯನಕ್ಕಾಗಿ ಈ ಸೌಲಭ್ಯವನ್ನು ಒದಗಿಸುವುದು.

6) ಡಿ. ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನ

1) ಭಾರತ ದೇಶದ ಪ್ರಜೆಯಾಗಿದ್ದು, ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.

2) ಸ್ನಾತಕೋತ್ತರ ಪದವಿ/ಪಿಹೆಚ್.ಡಿ/ಸಂಶೋಧನೆ- ಸಂಬಂಧಪಟ್ಟ ಪದವಿ/ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಠ ಶೇ.70 ಅಂಕಗಳು ಅಥವಾ ಸಮಾನವಾದ ಗ್ರೇಡ್ ಪಡೆದಿರಬೇಕು.

3) **ವಯೋಮಿತಿ:** ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಸರಿಯಾಗಿ ಸ್ನಾತಕೋತ್ತರ ಪದವಿಗೆ 25 ವರ್ಷ ಹಾಗೂ ಪಿಹೆಚ್.ಡಿ ಗೆ 27 ವರ್ಷದ ಮಿತಿಯೊಳಗಿರಬೇಕು.

4) **ಆದಾಯಮಿತಿ:** ವಿದ್ಯಾರ್ಥಿ ಮತ್ತು ಕುಟುಂಬದ ವಾರ್ಷಿಕ ಆದಾಯ ರೂ.6.00 ಲಕ್ಷ.

5) **ಧನಸಹಾಯದ ಮೊತ್ತ:**

ಅ) ವಾರ್ಷಿಕವಾಗಿ ಗರಿಷ್ಟ ರೂ.10.00 ಲಕ್ಷ ಅಥವಾ ವಾಸ್ತವ ವೆಚ್ಚ ಇವೆರಡರಲ್ಲಿ ಯಾವುದು ಕಡಿಮೆಯೋ ಆ ಮೊತ್ತವನ್ನು ನೀಡಲಾಗುವುದು.

ಆ) ಒಂದು ಕುಟುಂಬದ ಒಬ್ಬ ವಿದ್ಯಾರ್ಥಿಗೆ ಮಾತ್ರ ಈ ಧನಸಹಾಯವನ್ನು ನೀಡಲಾಗುವುದು.

6) **ಧನ ಸಹಾಯದ ಅವಧಿ**

ಅ) ಸ್ನಾತಕೋತ್ತರ ಪದವಿ – ಗರಿಷ್ಠ 2 ವರ್ಷ ಅಥವಾ ಕೋರ್ಸ್ ಮುಕ್ತಾಯದ ಅವಧಿಯಲ್ಲಿ ಯಾವುದು ಮೊದಲೋ ಆ ಅವಧಿಯನ್ನು ಪರಿಗಣಿಸಲಾಗುವುದು.

ಆ) ಪಿಎಚ್.ಡಿ/ಸಂಶೋಧನೆ – ಗರಿಷ್ಠ 3 ವರ್ಷ ಅಥವಾ ಕೋರ್ಸ್ ಮುಕ್ತಾಯದ ಅವಧಿಯಲ್ಲಿ ಯಾವುದು ಮೊದಲೋ ಆ ಅವಧಿಯನ್ನು ಪರಿಗಣಿಸಲಾಗುವುದು.

7) **ಆಯ್ಕೆ ವಿಧಾನ** – ಮೂರು ಹಂತಗಳನ್ನು ಒಳಗೊಂಡಿದೆ.

ಅ) ವಿದ್ಯಾರ್ಥಿಯಿಂದ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆ.

ಆ) ಸಂಬಂಧಪಟ್ಟ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಯಲ್ಲಿ ಮೂಲ ದಾಖಲೆಗಳ ಪರಿಶೀಲನೆ ಮತ್ತು ಮನೆ ಭೇಟಿ ಮಾಡಿ ಸ್ಥಳ ಪರಿಶೀಲನೆ.

ಇ) ಸರ್ಕಾರದ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಸಂದರ್ಶನ.

8) **ನಿಗದಿಪಡಿಸಿರುವ ಮೀಸಲಾತಿ –**

ಪ್ರವರ್ಗ	ಶೇಕಡವಾರು
ಪ್ರವರ್ಗ-1	24%
ಪ್ರವರ್ಗ-2ಎ	46%
ಪ್ರವರ್ಗ-3ಎ	14%
ಪ್ರವರ್ಗ-3ಬಿ	16%
ಒಟ್ಟು	100%

ಪ್ರತಿ ಪ್ರವರ್ಗದಲ್ಲಿ ಶೇ.33 ರಷ್ಟು ಮಹಿಳಾ ವಿದ್ಯಾರ್ಥಿಗಳು, ಶೇ.5 ರಷ್ಟು ಗ್ರಾಮೀಣ ಅಭ್ಯರ್ಥಿಗಳು ಮತ್ತು ಶೇ.3 ರಷ್ಟು ವಿಶೇಷ ಚೇತನ ವಿದ್ಯಾರ್ಥಿಗಳಿಗೆ ವಿದೇಶಿ ವ್ಯಾಸಂಗ ವೇತನ ನೀಡಲಾಗುವುದು.

7) ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ 'ಡಿ. ದೇವರಾಜ ಅರಸು ಪ್ರತಿಭಾ ಪುರಸ್ಕಾರ:

1. ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು.
2. ಕರ್ನಾಟಕ ಸರ್ಕಾರ ಅಧಿಸೂಚಿಸಿರುವ ಹಿಂದುಳಿದ ವರ್ಗಗಳ ಪಟ್ಟಿಗೆ ಸೇರಿರಬೇಕು.
3. ಶಾಸನಬದ್ಧ ವಿಶ್ವವಿದ್ಯಾಲಯಗಳು/ಅಧೀನಕ್ಕೆ ಒಳಪಡುವ/ಸರ್ಕಾರಿ/ಸ್ಥಳೀಯ ಸಂಸ್ಥೆಗಳು/ ಅನುದಾನಿತ ಸಂಸ್ಥೆಗಳು/ಮಾನ್ಯತೆ ಪಡೆದ ಅನುದಾನ ರಹಿತ ಖಾಸಗಿ ಸಂಸ್ಥೆಗಳಲ್ಲಿ ಅಧ್ಯಯನ ಮಾಡಿರಬೇಕು.
4. ಸಮಾನ ಕೋರ್ಸ್‌ಗಳಿಗೆ ಸಂಬಂಧಿಸಿದಂತೆ ಒಬ್ಬ ವಿದ್ಯಾರ್ಥಿಗೆ ಒಂದು ಬಾರಿ ಮಾತ್ರ ಈ ಸೌಲಭ್ಯವನ್ನು ಒದಗಿಸುವುದು.
5. ಕುಟುಂಬದ ಒಟ್ಟು ವಾರ್ಷಿಕ ಆದಾಯಮಿತಿ:
   ಪ್ರವರ್ಗ-1 – ರೂ.2.50 ಲಕ್ಷ.
   ಪ್ರವರ್ಗ-2(ಎ), 3(ಎ) ಮತ್ತು 3(ಬಿ) – ರೂ.1.00 ಲಕ್ಷ.

8) ನಿಲಯಾರ್ಥಿಗಳಿಗೆ ಪ್ರೋತ್ಸಾಹಧನ

1. ವಾರ್ಷಿಕ ಪಬ್ಲಿಕ್ ಪರೀಕ್ಷೆಗಳಲ್ಲಿ ಮೊದಲ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ನಿಲಯಾರ್ಥಿಗಳು ನಿಗದಿತ ಕಾಲಾವಕಾಶದೊಳಗೆ ಸಂಬಂಧಪಟ್ಟ ವಿದ್ಯಾರ್ಥಿನಿಲಯದ ಮೇಲ್ವಿಚಾರಕರು/ ನಿಲಯಪಾಲಕರ ಮುಖಾಂತರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಜಿಲ್ಲಾ ಹಿಂದುಳಿದ ವರ್ಗಗಳ ಅಧಿಕಾರಿಗಳಿಗೆ ಅರ್ಜಿ ಸಲ್ಲಿಸಬೇಕು.
2. ನಿಲಯದ ಮೇಲ್ವಿಚಾರಕರು/ನಿಲಯಪಾಲಕರು ಸದರಿ ವಿದ್ಯಾರ್ಥಿನಿಲಯದ ನಿಲಯಾರ್ಥಿಯಾಗಿದ್ದರೆಂದು ಪ್ರಮಾಣೀಕರಿಸಬೇಕು ಮತ್ತು ಅವನ/ಅವಳ ಹೆಸರನ್ನು ಪ್ರೋತ್ಸಾಹಧನ ಮಂಜೂರಾತಿಗಾಗಿ ಶಿಫಾರಸ್ಸು ಮಾಡಬೇಕು.
3. ಜಿಲ್ಲಾ ಹಿಂದುಳಿದ ವರ್ಗಗಳ ಅಧಿಕಾರಿಗಳು ನಿಲಯಾರ್ಥಿಗಳ ಹೆಸರು, ವಿದ್ಯಾರ್ಥಿ ನಿಲಯದ ಹೆಸರು, ಪರೀಕ್ಷೆ ಮತ್ತು ಯಾವ ಪರೀಕ್ಷೆಯಲ್ಲಿ ಅವನು/ಅವಳು ಪ್ರಥಮ ದರ್ಜೆಯನ್ನು ಪಡೆದಿದ್ದಾರೆ ಮುಂತಾದ ಮಾಹಿತಿಯನ್ನೊಳಗೊಂಡು ಕ್ರೋಢೀಕೃತ ಪ್ರಸ್ತಾವನೆಯನ್ನು ತಯಾರಿಸಿ ಅಗತ್ಯ ಮಾಹಿತಿಗಳೊಡನೆ ಮಂಜೂರಾತಿಗಾಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಲ್ಲಿಸಬೇಕು.
4. ಜಿಲ್ಲಾ ಹಿಂದುಳಿದ ವರ್ಗಗಳ ಅಧಿಕಾರಿಗಳು ಸಲ್ಲಿಸಿರುವ ಪ್ರಸ್ತಾವನೆಯನ್ವಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಸ್ತಾವನೆಯನ್ನು ಪರಿಶೀಲಿಸಿ ಮಂಜೂರಾತಿ ಆದೇಶವನ್ನು ನೀಡುವುದು.
5. ನಿಲಯಾರ್ಥಿಗಳು ಹಾಜರುಪಡಿಸುವ ಮೂಲ ಅಂಕಪತ್ರಗಳನ್ನು ಪರಿಶೀಲಿಸಿದ ನಂತರ ಜಿಲ್ಲಾ ಹಿಂದುಳಿದ ವರ್ಗಗಳ ಅಧಿಕಾರಿಗಳು ಹಣವನ್ನು ಖಜಾನೆಯಿಂದ ಪಡೆದು ಸಂಬಂಧಪಟ್ಟವರಿಗೆ ಹಂಚಿಕೆ ಮಾಡುವುದು.

9) IIT/IIM/IISc ಮುಂತಾದ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ

1. ಅಭ್ಯರ್ಥಿಯು ಭಾರತ ದೇಶದ ಪ್ರಜೆಯಾಗಿದ್ದು, ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.
2. ಕೇಂದ್ರ/ರಾಜ್ಯ ಸರ್ಕಾರದ/ಅನುದಾನಿತ ಸಂಸ್ಥೆಗಳ/ಸಾರ್ವಜನಿಕ ಸ್ವಾಮ್ಯತೆಗೆ ಒಳಪಟ್ಟ ಸಂಸ್ಥೆಗಳಲ್ಲಿನ ನೌಕರರು ಈ ಯೋಜನೆಗೆ ಅರ್ಜಿ ಸಲ್ಲಿಸಲು ಮತ್ತು ಧನಸಹಾಯ ಪಡೆಯಲು ಅರ್ಹರಲ್ಲ.
3. ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಅಥವಾ 3ಬಿ ಗೆ ಸೇರಿದವರಾಗಿರಬೇಕು ಅರ್ಜಿದಾರರ ಕುಟುಂಬದ ವಾರ್ಷಿಕ ಆದಾಯ ರೂ.6.00 ಲಕ್ಷಗಳಿಗೆ ಮೀರಿರಬಾರದು. ಆರ್ಥಿಕವಾಗಿ ಹಿಂದುಳಿದ, ವಾರ್ಷಿಕವಾಗಿ ರೂ.6.00 ಲಕ್ಷಗಳಿಗಿಂತ ಕಡಿಮೆ ಆದಾಯ ಹೊಂದಿರುವ ಸಾಮಾನ್ಯ ಅಭ್ಯರ್ಥಿಗಳು ಸಹ ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.

4. ಅರ್ಜಿಯೊಂದಿಗೆ ವಿದ್ಯಾರ್ಥಿಗಳು ಸಲ್ಲಿಸಿರುವ ದಾಖಲೆಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ಸಲ್ಲಿಸಿ ಮೂಲ ದಾಖಲೆಗಳನ್ನು ಪರಿಶೀಲಿಸಿಕೊಳ್ಳತಕ್ಕದ್ದು.
5. IIM,IIT,IISC– ಮುಂತಾದ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡದಿರಬೇಕು.
6. ಆದಾಯ ಮಿತಿ – ಅರ್ಜಿದಾರರು ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ ಅಥವಾ 3ಬಿ ಗೆ ಸೇರಿದವರಾಗಿರಬೇಕು. ಅಭ್ಯರ್ಥಿ ಮತ್ತು ಕುಟುಂಬದ ವಾರ್ಷಿಕ ಆದಾಯ ರೂ.6.00 ಲಕ್ಷಗಳಿಗೆ ಮೀರಿರಬಾರದು.
7. IIM, IIT, IISC – ಮುಂತಾದ ಒಟ್ಟು 13 ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪದವಿ, ಸ್ನಾತಕೋತ್ತರ ಪದವಿ ಹಾಗೂ ಪೂರ್ಣಾವಧಿ ಪಿಹೆಚ್.ಡಿಗಾಗಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದು ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಸದರಿ ಕಾರ್ಯಕ್ರಮದಡಿ ಸೌಲಭ್ಯ ಒದಗಿಸಲಾಗುವುದು.
8. ಈ ಮೇಲ್ಕಂಡ ಸಂಸ್ಥೆಗಳಲ್ಲಿ ಡಿಪ್ಲೊಮಾ, ಪಿಜಿ ಡಿಪ್ಲೊಮಾ ಹಾಗೂ ಇತರೆ ಸರ್ಟಿಫಿಕೇಟ್ ಕೋರ್ಸುಗಳಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಧನ ಸಹಾಯ ಪಡೆಯಲು ಅರ್ಹರಿರುವುದಿಲ್ಲ.
9. IIM, IIT, IISC ಮುಂತಾದ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದ ವಿದ್ಯಾರ್ಥಿಗಳು ತಮ್ಮ ಜೀವಿತಾವಧಿಯಲ್ಲಿ ಒಂದು ಭಾರಿ ಮಾತ್ರ ಈ ಸೌಲಭ್ಯವನ್ನು ಪಡೆಯಲು ಅರ್ಹರಿರುತ್ತಾರೆ.
10. ಈ ಕಾರ್ಯಕ್ರಮವು ವಿದ್ಯಾರ್ಥಿಗಳಿಗೆ ಅವರ ಶಿಕ್ಷಣವನ್ನು ಮುಂದುವರೆಸಲು ಪ್ರೋತ್ಸಾಹ ನೀಡುವ ಕಾರ್ಯಕ್ರಮವಾಗಿದ್ದು, ಈ ಸೌಲಭ್ಯವನ್ನು ಪಡೆಯುವ ವಿದ್ಯಾರ್ಥಿಗಳು ಶುಲ್ಕ ವಿನಾಯಿತಿ ಯೋಜನೆಯಡಿಯು ಸಹ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.

III. ತರಬೇತಿ ಕಾರ್ಯಕ್ರಮಗಳು

1) ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ಪರೀಕ್ಷಾ ಪೂರ್ವ ತರಬೇತಿ

ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಐ.ಎ.ಎಸ್, ಕೆ.ಎ.ಎಸ್ ಹಾಗೂ ಬ್ಯಾಂಕ್ ಪ್ರೊಬೇಷನರ್ ಆಫೀಸರ್ಸ್ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ತರಬೇತಿಯನ್ನು ಖಾಸಗಿ ತರಬೇತಿ ಸಂಸ್ಥೆಗಳ ಮೂಲಕ ನೀಡಲಾಗುತ್ತಿದೆ.

ಅರ್ಹತೆಗಳು:

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಿಂದುಳಿದ ವರ್ಗಗಳ ಅಭ್ಯರ್ಥಿಯು ಐ.ಎ.ಎಸ್, ಕೆ.ಎ.ಎಸ್ ಅಥವಾ ಬ್ಯಾಂಕ್ ಪ್ರೊಬೇಷನರ್ ಆಫೀಸರ್ಸ್ ಪರೀಕ್ಷೆಗಳ ಪರೀಕ್ಷಾ ಪೂರ್ವ ತರಬೇತಿಗಳಲ್ಲಿ ಯಾವುದಾರೊಂದಕ್ಕೆ ಒಂದು ಬಾರಿ ಮಾತ್ರ ಉಚಿತ ಪರೀಕ್ಷಾ ಪೂರ್ವ ತರಬೇತಿಯನ್ನು ಪಡೆಯಬಹುದು.

1. ಕರ್ನಾಟಕ ರಾಜ್ಯದ ನಿವಾಸಿಯಾಗಿದ್ದು, ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ), 3(ಎ) ಅಥವಾ 3(ಬಿ) ಗೆ ಸೇರಿದ ಅರ್ಹ ಅಭ್ಯರ್ಥಿಗಳು online ಮೂಲಕ ಅರ್ಜಿಗಳನ್ನು ಸಲ್ಲಿಸುವುದು.
2. ಅಭ್ಯರ್ಥಿಯ ಮತ್ತು ಕುಟುಂಬದ ವಾರ್ಷಿಕ ಆದಾಯ ಮಿತಿ ಪ್ರವರ್ಗ 1 ರ ಅಭ್ಯರ್ಥಿಗಳಿಗೆ ರೂ.4.50 ಲಕ್ಷ ಹಾಗೂ ಪ್ರವರ್ಗ 2(ಎ), 3(ಎ) ಮತ್ತು 3(ಬಿ) ಅಭ್ಯರ್ಥಿಗಳಿಗೆ ರೂ.3.50 ಲಕ್ಷಗಳು.
3. ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ಪಡೆದಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಹೊಂದಿರಬೇಕು.
4. ಅಭ್ಯರ್ಥಿಯು ಯಾವುದಾದರೊಂದು ಅಂಗೀಕೃತ ವಿಶ್ವವಿದ್ಯಾಲಯದ ಪದವೀಧರನಾಗಿರಬೇಕು ಅಥವಾ ಕೇಂದ್ರ ಲೋಕಸೇವಾ ಆಯೋಗ/ಕರ್ನಾಟಕ ಲೋಕಸೇವಾ ಆಯೋಗ/ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು (ಬ್ಯಾಂಕ್) ಕೋರುವ ಷರತ್ತಿಗೊಳಪಟ್ಟಿರಬೇಕು.
5. ಅಭ್ಯರ್ಥಿಯು ಕನಿಷ್ಠ 21 ವರ್ಷ ವಯಸ್ಸಿನವರಾಗಿರಬೇಕು.
6. ಕೇಂದ್ರ/ರಾಜ್ಯ ಸರ್ಕಾರದ/ಅನುದಾನಿತ ಸಂಸ್ಥೆಗಳ/ಸಾರ್ವಜನಿಕ ಸ್ವಾಮ್ಯತೆಗೆ ಒಳಪಟ್ಟ ಸಂಸ್ಥೆಗಳಲ್ಲಿನ ನೌಕರರು ಅರ್ಜಿ ಸಲ್ಲಿಸಲು ಮತ್ತು ತರಬೇತಿ ಪಡೆಯಲು ಅರ್ಹರಲ್ಲ.

2) ಹಿಂದುಳಿದ ವರ್ಗದ ನರ್ಸಿಂಗ್ ವಿದ್ಯಾರ್ಥಿಗಳಿಗೆ ಶಿಷ್ಯವೇತನ, ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹ:

ಅವಧಿ:

ಡಿ.ಜಿ.ಎನ್.ಎಂ. – 3 1/2 ವರ್ಷಗಳು.

ಬಿ.ಎಸ್ಸಿ. ನರ್ಸಿಂಗ್ – 4 ವರ್ಷಗಳು.

ಪ್ಯಾರಾ ಮೆಡಿಕಲ್ (ಎಸ್.ಎಸ್.ಎಲ್.ಸಿ) – 3 ವರ್ಷಗಳು.

ಪ್ಯಾರಾ ಮೆಡಿಕಲ್ (ಪಿ.ಯು.ಸಿ) – 2 ವರ್ಷಗಳು.

ಅಭ್ಯರ್ಥಿಗಳಿಗೆ ನಿಗದಿಪಡಿಸಿರುವ ಅರ್ಹತೆ:

1. ಅಭ್ಯರ್ಥಿಗಳ ಮತ್ತು ಕುಟುಂಬದ ವಾರ್ಷಿಕ ಆದಾಯ ಮಿತಿ ಪ್ರವರ್ಗ 1 ರ ಅಭ್ಯರ್ಥಿಗಳಿಗೆ ರೂ.2.50 ಲಕ್ಷ ಹಾಗೂ ಪ್ರವರ್ಗ 2 (ಎ), 3 (ಎ) ಮತ್ತು 3 (ಬಿ) ಅಭ್ಯರ್ಥಿಗಳಿಗೆ ರೂ.1.00 ಲಕ್ಷಗಳು.
2. ಡಿ.ಜಿ.ಎನ್.ಎಂ, ಬಿ.ಎಸ್ಸಿ. ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ (ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ.) ಅಭ್ಯರ್ಥಿಗಳನ್ನು ಅವರ ಹಿಂದಿನ ವಾರ್ಷಿಕ ಪರೀಕ್ಷೆಯಲ್ಲಿ ಗಳಿಸಿರುವ ಅಂಕಗಳ ಆಧಾರದ ಮೇಲೆ ತರಬೇತಿಗೆ ಆಯ್ಕೆ ಮಾಡಲಾಗುವುದು.

3) ವಿಶ್ವವಿದ್ಯಾಲಯಗಳಲ್ಲಿನ ಹಿಂದುಳಿದ ವರ್ಗಗಳ ಕೋಶಕ್ಕೆ ಅನುದಾನ:

1. ಕರ್ನಾಟಕ ರಾಜ್ಯದ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಕಲ್ಯಾಣಕ್ಕಾಗಿ ಸ್ಥಾಪಿಸಿರುವ ಹಿಂದುಳಿದ ವರ್ಗಗಳ ಕೋಶವನ್ನು ಬಲಪಡಿಸುವುದು.
2. ಹಿಂದುಳಿದ ವರ್ಗಗಳ ಕೋಶದ ಮೂಲಕ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲು ವಿಶ್ವವಿದ್ಯಾಲಯಗಳಿಗೆ ಧನಸಹಾಯವನ್ನು ಒದಗಿಸುವುದು.

4) ಕಾನೂನು ಪದವೀಧರರಿಗೆ ತರಬೇತಿ

1. ಅಭ್ಯರ್ಥಿಗಳ ಮತ್ತು ಕುಟುಂಬದ ವಾರ್ಷಿಕ ಆದಾಯ ಮಿತಿ ಪ್ರವರ್ಗ 1 ರ ಅಭ್ಯರ್ಥಿಗಳಿಗೆ ರೂ.3.50 ಲಕ್ಷ ಹಾಗೂ ಪ್ರವರ್ಗ 2 (ಎ), 3 (ಎ) ಮತ್ತು 3 (ಬಿ) ಅಭ್ಯರ್ಥಿಗಳಿಗೆ ರೂ.2.50 ಲಕ್ಷಗಳು.
2. ಪ್ರವರ್ಗ-1 ರ ಅಭ್ಯರ್ಥಿಗಳಿಗೆ 31 ವರ್ಷಗಳು ಮತ್ತು ಇತರ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ 30 ವರ್ಷ ಗರಿಷ್ಠ ವಯೋಮಿತಿ ಇರುತ್ತದೆ.
3. ಅರ್ಭರ್ಥಿಯು ಬಾರ್ ಕೌನ್ಸಿಲ್‌ನಲ್ಲಿ ಹೆಸರನ್ನು ನೋಂದಾಯಿಸಿರಬೇಕು. ತರಬೇತಿಗೆ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕಕ್ಕೆ ಹಿಂದೆ 2 ವರ್ಷಗಳೊಳಗಾಗಿ ಕಾನೂನು ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.
4. ಅವಧಿ: 4 ವರ್ಷಗಳ ಅವಧಿಗೆ ವಕೀಲಿ ವೃತ್ತಿಯಲ್ಲಿ ತರಬೇತಿ.
5. ಅಭ್ಯರ್ಥಿಗಳ ಸಂಖ್ಯೆ ಪ್ರತಿ ಜಿಲ್ಲೆಯಲ್ಲಿ ಗರಿಷ್ಠ 10 ಅಭ್ಯರ್ಥಿಗಳು (ಜಿಲ್ಲಾವಲಯ ಕಾರ್ಯಕ್ರಮವಾಗಿದೆ).

5) ಹೊಲಿಗೆ ತರಬೇತಿ

1. ಅಭ್ಯರ್ಥಿಯು 7ನೇ ತರಗತಿಯಲ್ಲಿ ತೇರ್ಗಡೆಯಾಗಿರಬೇಕು.
2. ಅಭ್ಯರ್ಥಿಗಳ ಮತ್ತು ಕುಟುಂಬದ ವಾರ್ಷಿಕ ಆದಾಯ ಮಿತಿ ಪ್ರವರ್ಗ 1 ರ ಅಭ್ಯರ್ಥಿಗಳಿಗೆ ರೂ.2.50 ಲಕ್ಷ ಹಾಗೂ ಪ್ರವರ್ಗ 2(ಎ), 3(ಎ) ಅಥವಾ 3(ಬಿ) ಅಭ್ಯರ್ಥಿಗಳಿಗೆ ರೂ.1.00 ಲಕ್ಷಗಳು
3. ಹೊಲಿಗೆ ತರಬೇತಿ ಕೇಂದ್ರಗಳಲ್ಲಿ ನಡೆಸುವ ಪರೀಕ್ಷೆಯಲ್ಲಿ ಅನುತ್ತೀರ್ಣರಾಗುವ ಅಭ್ಯರ್ಥಿಗಳು 2 ವರ್ಷದೊಳಗೆ ಮತ್ತೆ ಒಮ್ಮೆ ಪರೀಕ್ಷೆಗೆ ಹಾಜರಾಗಲು ಅವಕಾಶವಿರುತ್ತದೆ.

6) ಭಾರತೀಯ ಸೇನೆಗೆ ಸೇರ ಬಯಸುವ ರಾಜ್ಯದ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಮತ್ತು ತರಬೇತಿ.

1. ಅಭ್ಯರ್ಥಿಯು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿದ್ದು, ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಅಥವಾ 3(ಬಿ) ಗೆ ಸೇರಿರಬೇಕು.

2. ಅಭ್ಯರ್ಥಿಯ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ – ಪ್ರವರ್ಗ-1ರ ಅಭ್ಯರ್ಥಿಗಳಿಗೆ ರೂ.2.50 ಲಕ್ಷ ಮತ್ತು ಪ್ರವರ್ಗ 2(ಎ), 3(ಎ) ಮತ್ತು 3(ಬಿ) ಗಳ ಅಭ್ಯರ್ಥಿಗಳಿಗೆ ರೂ.1.00 ಲಕ್ಷ.
3. ಭಾರತೀಯ ಸೇನೆಗಳಿಗೆ ನಿಗದಿಪಡಿಸುವ ವಿದ್ಯಾರ್ಹತೆ, ವಯೋಮಿತಿ ಮತ್ತು ಇತರೆ ಅರ್ಹತೆಗಳನ್ನು ಹೊಂದಿರಬೇಕು.

7) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿರುವ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿರುವ ಅಂತಿಮ ಪದವಿ ಮತ್ತು ಸ್ನಾತಕೋತ್ತರ ಪದವಿಯನ್ನು ಅಧ್ಯಯನ ಮಾಡುತ್ತಿರುವ ಆಸಕ್ತ ವಿದ್ಯಾರ್ಥಿಗಳಲ್ಲಿ ಐ.ಎ.ಎಸ್, ಐ.ಪಿ.ಎಸ್, ಕೆ.ಎ.ಎಸ್, ಬ್ಯಾಂಕಿಂಗ್ ಇತ್ಯಾದಿ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ತಿಳುವಳಿಕೆ ಹೆಚ್ಚಿಸಲು ಮತ್ತು ಮಾರ್ಗದರ್ಶನ ನೀಡಲು ಪ್ರತಿ ಶೈಕ್ಷಣಿಕ ವರ್ಷದಲ್ಲಿ 3 ಬಾರಿ 1 ದಿನದ ಕಾರ್ಯಕ್ರಮವನ್ನು ತಾಲ್ಲೂಕು ಮಟ್ಟದಲ್ಲಿ ಅನುಷ್ಠಾನಗೊಳಿಸುವುದು.

IV. ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ಅಭಿವೃದ್ಧಿ ಕಾರ್ಯಕ್ರಮಗಳು

1) ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ

1. ಹಿಂದುಳಿದ ವರ್ಗಗಳ ಅಲೆಮಾರಿ ಹಾಗೂ ಅರೆಅಲೆಮಾರಿ ಪಂಗಡಕ್ಕೆ ಸೇರಿದ ವಿದ್ಯಾರ್ಥಿ ಆಗಿರಬೇಕು.
2. ವಿದ್ಯಾರ್ಥಿಯ, ಅವರ ತಂದೆ-ತಾಯಿ ಪಾಲಕರು/ಪೋಷಕರ ವಾರ್ಷಿಕ ಆದಾಯ ರೂ.2.00 ಲಕ್ಷ ಮಿತಿಯೊಳಗಿರಬೇಕು.
3. ವಿದ್ಯಾರ್ಥಿಯು, 1 ರಿಂದ 10ನೇ ತರಗತಿಯವರೆಗೆ, ಸರ್ಕಾರಿ ಅಥವಾ ಸರ್ಕಾರದಿಂದ ಮಾನ್ಯತೆ ಪಡೆದ ಖಾಸಗಿ ಶಿಕ್ಷಣ ಸಂಸ್ಥೆಯಲ್ಲಿ ವ್ಯಾಸಂಗ ಮಾಡುತ್ತಿರಬೇಕು.
4. ಈ ಯೋಜನೆಯಡಿ ಅರ್ಜಿ ಸಲ್ಲಿಸಲು ವಿದ್ಯಾರ್ಥಿ ಹಿಂದಿನ ತರಗತಿಯ ವಾರ್ಷಿಕ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.
5. ವಿದ್ಯಾರ್ಥಿಯು ಸರ್ಕಾರದ ಇನ್ನಾವುದೇ ಯೋಜನೆಯಿಂದ ವಿದ್ಯಾರ್ಥಿವೇತನ ಅಥವಾ ವಸತಿನಿಲಯ ಸೌಲಭ್ಯವನ್ನು ಪಡೆದಿರಬಾರದು.
6. ಈ ಪ್ರೋತ್ಸಾಹಧನವನ್ನು ನವೀಕರಿಸಲು ವಿದ್ಯಾರ್ಥಿಯು ಹಿಂದಿನ ತರಗತಿಯ ವಾರ್ಷಿಕ ಪರೀಕ್ಷೆಯಲ್ಲಿ ಎಲ್ಲಾ ವಿಷಯಗಳಲ್ಲಿ ಉತ್ತೀರ್ಣರಾಗಿರಬೇಕು.

2) ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಅರ್ಹತಾ ವಿದ್ಯಾರ್ಥಿವೇತನ

1. ವಿದ್ಯಾರ್ಥಿಯು ಹಿಂದುಳಿದ ವರ್ಗಗಳ ಅಲೆಮಾರಿ ಹಾಗೂ ಅರೆಅಲೆಮಾರಿ ಪಂಗಡಗಳಿಗೆ ಸೇರಿರಬೇಕು. (ಹಾಲಿ ಚಾಲ್ತಿಯಲ್ಲಿರುವ ಹಿಂದುಳಿದ ವರ್ಗಗಳ ಪಟ್ಟಿಯ ಪ್ರವರ್ಗ-1ರಲ್ಲಿ ಸೇರಿಸಲ್ಪಟ್ಟಿರಬೇಕು ಹಾಗೂ ದಿನಾಂಕ: 01-02-1966ರ ಆದೇಶದಲ್ಲಿ ಅಲೆಮಾರಿ ಹಾಗೂ ಅರೆಅಲೆಮಾರಿ ಪಂಗಡಗಳೆಂದು ಗುರ್ತಿಸಲ್ಪಟ್ಟಿರಬೇಕು)
2. ಅಭ್ಯರ್ಥಿಯು ಈ ಯೋಜನೆಯ ಸೌಲಭ್ಯಕ್ಕೆ ಪ್ರಥಮವಾಗಿ ಅರ್ಜಿ ಸಲ್ಲಿಸಲು ಹಿಂದಿನ ತರಗತಿಯ ವಾರ್ಷಿಕ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.
3. ಈ ಅರ್ಹತಾ ವಿದ್ಯಾರ್ಥಿ ವೇತನದ ನವೀಕರಣಕ್ಕೆ ವಿದ್ಯಾರ್ಥಿಯು ಹಿಂದಿನ ತರಗತಿ ಪರೀಕ್ಷೆಯ ಎಲ್ಲಾ ವಿಷಯಗಳಲ್ಲಿ ಉತ್ತೀರ್ಣರಾಗಿರಬೇಕು.
4. ವಿದ್ಯಾರ್ಥಿಯು ಪೋಷಕರ/ಪಾಲಕರ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷಗಳಿಗಿಂತ ಮೀರಿರಬಾರದು.
5. ವಿದ್ಯಾರ್ಥಿಯು ಸರ್ಕಾರದಿಂದ/ ವಿಶ್ವವಿದ್ಯಾಲಯದಿಂದ ಇನ್ನ್ಯಾವುದೇ ವಿದ್ಯಾರ್ಥಿವೇತನ ಅಥವಾ ಉಚಿತ ವಿದ್ಯಾರ್ಥಿನಿಲಯ ಸೌಲಭ್ಯ ಪಡೆದಿರಬಾರದು.

3) ಆಶ್ರಮ ಶಾಲೆಗಳ ಪ್ರಾರಂಭ ಹಾಗೂ ನಿರ್ವಹಣೆ:

1. ಹಿಂದುಳಿದ ವರ್ಗಗಳ ಅಲೆಮಾರಿ ಹಾಗೂ ಅರೆಅಲೆಮಾರಿ ಪಂಗಡಗಳಿಗೆ ಸೇರಿರಬೇಕು. (ಹಾಲಿ ಚಾಲ್ತಿಯಲ್ಲಿರುವ ಹಿಂದುಳಿದ ವರ್ಗಗಳ ಪಟ್ಟಿಯ ಪ್ರವರ್ಗ-1ರಲ್ಲಿ ಸೇರಿಸಲ್ಪಟ್ಟಿರಬೇಕು ಹಾಗೂ ದಿನಾಂಕ: 01-02-1966ರ ಆದೇಶದಲ್ಲಿ ಅಲೆಮಾರಿ ಹಾಗೂ ಅರೆಅಲೆಮಾರಿ ಪಂಗಡಗಳೆಂದು ಗುರ್ತಿಸಲ್ಪಟ್ಟಿರಬೇಕು)
2. 1ನೇ ತರಗತಿಗೆ ಪ್ರವೇಶ ಪಡೆಯುವ ಮಕ್ಕಳ ವಯಸ್ಸು ಸಾರ್ವಜನಿಕ ಶಿಕ್ಷಣ ಇಲಾಖೆಯು ಪ್ರಾಥಮಿಕ ಶಾಲೆ ಪ್ರವೇಶಕ್ಕೆ ನಿಗದಿಪಡಿಸಿರುವ ಕನಿಷ್ಠ ವಯೋಮಿತಿ ಉಳ್ಳವರಾಗಿರತಕ್ಕದ್ದು.
3. ಈ ಆಶ್ರಮ ಶಾಲೆಗಳಲ್ಲಿ ಶೇ.75 ಭಾಗ ಅಲೆಮಾರಿ ಹಾಗೂ ಅರೆಅಲೆಮಾರಿ ಜನಾಂಗದ ಮಕ್ಕಳಿಗೆ ಕಡ್ಡಾಯವಾಗಿ ಮೀಸಲಿಡಲಾಗಿರುತ್ತದೆ. ಉಳಿದ ಶೇಕಡ 25 ರಷ್ಟು ಸ್ಥಾನಗಳನ್ನು ಈ ಕೆಳಗಿನ ಶೇಕಡವಾರು ಅನುಪಾತದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ ಮತ್ತು 3ಬಿ ಮಕ್ಕಳಿಗೆ ಕಾಯ್ದಿರಿಸಲಾಗುತ್ತದೆ.

ಪ್ರವರ್ಗ	1	2ಎ	2ಬಿ	3ಎ	3ಬಿ	ಎಸ್.ಸಿ.	ಎಸ್.ಟಿ.	ಒಟ್ಟು
ಶೇಕಡವಾರು ಅನುಪಾತ	10	35	09	09	12	21	4	100%

4) ರಾಜ್ಯದ ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶಾವಕಾಶ ಸೌಲಭ್ಯ.

ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಅಲೆಮಾರಿ / ಅರೆ ಅಲೆಮಾರಿ ಜಾತಿಗಳಿಗೆ ಸೇರಿರತಕ್ಕದ್ದು. ಹಾಲಿ ಚಾಲ್ತಿಯಲ್ಲಿರುವ ಹಿಂದುಳಿದ ವರ್ಗಗಳ ಪಟ್ಟಿಯ ಪ್ರವರ್ಗ-1ರಲ್ಲಿ ಸೇರಿಸಲ್ಪಟ್ಟಿರಬೇಕು ಹಾಗೂ ದಿನಾಂಕ: 01-02-1966ರ ಆದೇಶದಲ್ಲಿ ಅಲೆಮಾರಿ ಹಾಗೂ ಅರೆಅಲೆಮಾರಿ ಪಂಗಡಗಳೆಂದು ಗುರ್ತಿಸಲ್ಪಟ್ಟಿರಬೇಕು)

ಆದಾಯ ಮಿತಿ: ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ಆದಾಯ ರೂ.2.00 ಲಕ್ಷದೊಳಗಿರಬೇಕು.

5) ಅರಿವು ಮೂಡಿಸುವ ಕಾರ್ಯಕ್ರಮ:

1. ಗೊಲ್ಲ ಹಾಗೂ ಇತರೆ ಅಲೆಮಾರಿ/ ಅರೆಅಲೆಮಾರಿ ಸಮುದಾಯದವರ ಅತ್ಯಂತ ಹೆಚ್ಚು ಜನಸಂಖ್ಯೆಯುಳ್ಳ ಕಾಲೋನಿ/ ಹಟ್ಟಿಗಳನ್ನು ಅರಿವು ಮೂಡಿಸುವ ಕಾರ್ಯಕ್ರಮಗಳಿಗಾಗಿ ಆಯ್ಕೆ ಮಾಡಲಾಗುವುದು.
2. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಾರ್ತಾ ಇಲಾಖೆಯ ಸಹಯೋಗದೊಂದಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಆಯೋಜಿಸುವುದು.
3. ಅಲೆಮಾರಿ/ ಅರೆಅಲೆಮಾರಿ ಸಮುದಾಯದವರಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ / ಇತರೆ ಇಲಾಖೆಗಳಿಂದ ದೊರೆಯುವ ಸವಲತ್ತುಗಳ ಬಗ್ಗೆ ಅರಿವು ಮೂಡಿಸುವುದು.
4. ಗೊಲ್ಲ ಸಮುದಾಯದ ಕಾಲೋನಿಗಳಲ್ಲಿ ಹೆಣ್ಣು ಮಕ್ಕಳ ಹೆರಿಗೆ ಹಾಗೂ ಮಾಸಿಕ ಋತುಚಕ್ರದ ಸಂದರ್ಭದಲ್ಲಿ ಗೊಲ್ಲರಹಟ್ಟಿಯಿಂದ ದೂರವಿಡುವ ಪದ್ಧತಿಯ ವಿರುದ್ಧ ಅರಿವನ್ನು ಮೂಡಿಸುವುದು.
5. ಒಂದು ಕಾರ್ಯಕ್ರಮಕ್ಕೆ ರೂ.10,000/-ದಂತೆ ಅನುದಾನ ಬಿಡುಗಡೆ ಮಾಡಲಾಗುವುದು.

6) ಮೂಲಭೂತ ಸೌಕರ್ಯಗಳು – ಕಾಂಕ್ರಿಟ್ ರಸ್ತೆ ಮತ್ತು ಚರಂಡಿ :

1. ಅಲೆಮಾರಿ / ಅರೆ ಅಲೆಮಾರಿ ಜನಾಂಗದವರು ಹೆಚ್ಚಾಗಿ ವಾಸಿಸುತ್ತಿರುವ ಕಾಲೋನಿಗಳು ಹಾಗೂ ಹೊಸದಾಗಿ ನಿರ್ಮಿಸಿರುವ ಬಡಾವಣೆಗಳಲ್ಲಿ ಕಾಂಕ್ರಿಟ್ ರಸ್ತೆ ಮತ್ತು ಚರಂಡಿ ನಿರ್ಮಾಣಕ್ಕಾಗಿ ಬರುವ ಪ್ರಸ್ತಾವನೆಗಳನ್ನು ಕರ್ನಾಟಕ ಅಲೆಮಾರಿ / ಅರೆ ಅಲೆಮಾರಿ ಅಭಿವೃದ್ಧಿ ಮಂಡಳಿಯ ಸಭೆಯಲ್ಲಿ ಮಂಡಿಸಿ, ಅನುದಾನ ಬಿಡುಗಡೆ ಮಾಡುವ ಬಗ್ಗೆ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುವುದು.
2. ಜಿಲ್ಲಾಧಿಕಾರಿಗಳ ಹಂತದಲ್ಲೇ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿ, ಅನುಷ್ಠಾನ ಮಾಡುವ ಸಂಸ್ಥೆಗಳನ್ನು ಗುರುತಿಸಿ, ಕಾಮಗಾರಿಯನ್ನು ಅನುಷ್ಠಾನ ಮಾಡಲಾಗುತ್ತದೆ.

7) ವಸತಿ ಯೋಜನೆ

- ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಹಿಂದುಳಿದ ವರ್ಗಗಳ ಅಲೆಮಾರಿ / ಅರೆಅಲೆಮಾರಿ ಜನಾಂಗದ ಎಲ್ಲಾ ಜಾತಿಗಳಿಗೂ ಪ್ರಾತಿನಿಧ್ಯತೆಯನ್ನು ನೀಡುವುದು
  (ಹಾಲಿ ಚಾಲ್ತಿಯಲ್ಲಿರುವ ಹಿಂದುಳಿದ ವರ್ಗಗಳ ಪಟ್ಟಿಯ ಪ್ರವರ್ಗ-1ರಲ್ಲಿ ಸೇರಿಸಲ್ಪಟ್ಟಿರಬೇಕು ಹಾಗೂ ದಿನಾಂಕ: 01-02-1966ರ ಆದೇಶದಲ್ಲಿ ಅಲೆಮಾರಿ ಹಾಗೂ ಅರೆಅಲೆಮಾರಿ ಪಂಗಡಗಳೆಂದು ಗುರ್ತಿಸಲ್ಪಟ್ಟಿರಬೇಕು)
  - ಫಲಾನುಭವಿಯು ಬೇರೆ ಯಾವುದೇ ಯೋಜನೆ ಅಥವಾ ಇಲಾಖೆಯಿಂದ ವಸತಿ ಸೌಲಭ್ಯವನ್ನು ಪಡೆದಿರಬಾರದು.
  - ಕನಿಷ್ಠ 20 ವರ್ಷದವರೆಗೆ ಈ ನಿವೇಶನವನ್ನು ಪರಭಾರೆ ಪಡೆತಕ್ಕದ್ದಲ್ಲ. ಈ ಅವಧಿಯಲ್ಲಿ ಪರಭಾರೆ ಮಾಡಿದ್ದಲ್ಲಿ, ಮಾರಾಟ ಮಾಡುವಾಗ ಇದ್ದ ಮಾರುಕಟ್ಟೆ ಬೆಲೆಯನ್ನು ಸರ್ಕಾರಕ್ಕೆ ಪಾವತಿ ಮಾಡಬೇಕು.
  - ವಸತಿ ರಹಿತರು ಸ್ವಂತ ನಿವೇಶನ ಹೊಂದಿರಬೇಕು ಹಾಗೂ ನಿವೇಶನವು ಕುಟುಂಬದ ಮಹಿಳೆಯರ/ ಪುರುಷರ ಹೆಸರಿನಲ್ಲಿ ನೊಂದಣಿಯಾಗಿರಬೇಕು.
  - ರಾಜೀವ ಗಾಂಧಿ ವಸತಿ ನಿಗಮದ ಮೂಲಕ ಅನುಷ್ಠಾನವಾಗುವ ಎಲ್ಲಾ ವಸತಿ ಯೋಜನೆಗಳ ನಿಯಮಗಳು ಈ ಯೋಜನೆಗೂ ಅನ್ವಯವಾಗುತ್ತದೆ.
  - ಕುಟುಂಬದ ಒಟ್ಟು ವಾರ್ಷಿಕ ವರಮಾನ ರೂ.2.00 ಲಕ್ಷದ ಮಿತಿಯೊಳಗೆ ಇರಬೇಕು.

8) ನಿವೇಶನ ರಹಿತರಿಗೆ ವಸತಿ ನಿವೇಶನ ಒದಗಿಸಲು ಜಮೀನು ಖರೀದಿ

- ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಅಲೆಮಾರಿ/ಅರೆಅಲೆಮಾರಿ ಜನಾಂಗದ ಎಲ್ಲಾ ಜಾತಿಗಳಿಗೂ ಪ್ರಾತಿನಿಧ್ಯತೆಯನ್ನು ನೀಡುವುದು.
  (ಹಾಲಿ ಚಾಲ್ತಿಯಲ್ಲಿರುವ ಹಿಂದುಳಿದ ವರ್ಗಗಳ ಪಟ್ಟಿಯ ಪ್ರವರ್ಗ-1ರಲ್ಲಿ ಸೇರಿಸಲ್ಪಟ್ಟಿರಬೇಕು ಹಾಗೂ ದಿನಾಂಕ: 01-02-1966ರ ಆದೇಶದಲ್ಲಿ ಅಲೆಮಾರಿ ಹಾಗೂ ಅರೆಅಲೆಮಾರಿ ಪಂಗಡಗಳೆಂದು ಗುರ್ತಿಸಲ್ಪಟ್ಟಿರಬೇಕು)
- ಸರ್ಕಾರದ ಆದೇಶ ಸಂ.ಪಿಹೆಚ್ಎಸ್ 262 ಎಸ್ಇಡಬ್ಲ್ಯೂ 65, ದಿ:1.02.1966 ರಲ್ಲಿ ನಮೂದಿಸಿರುವ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಜಮೀನು ಖರೀದಿ ಸಮಿತಿಯಲ್ಲಿ ಸರ್ಕಾರದ ನಿಯಮಾವಳಿ ಅನುಸಾರ ಮಾರ್ಗಸೂಚಿಗಳನ್ವಯ ಜಮೀನು ಖರೀದಿಸಿ ಬಡಾವಣೆ ಅಭಿವೃದ್ಧಿ ಪಡಿಸಿ ನಿವೇಶನಗಳನ್ನು ಹಂಚುವುದು.
- ಖರೀದಿಗೆ ಪ್ರಸ್ತಾಪಿಸುವ ಜಮೀನು ಯಾವುದೇ ಋಣಭಾರದಿಂದ ಮುಕ್ತವಾಗಿರತಕ್ಕದ್ದು.

IV. ವಿವಿಧ ಸಮುದಾಯಗಳ ಅಭಿವೃದ್ಧಿ

1) ಸಮುದಾಯ ಭವನಗಳ / ಖಾಸಗಿ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ

1. ಸಹಾಯಧನ ಪಡೆಯುವ ಸಂಸ್ಥೆಯು, ಕರ್ನಾಟಕ ಸಂಘ-ಸಂಸ್ಥೆಗಳ ನೋಂದಣಿ ಕಾಯ್ದೆ 1960 ಅಥವಾ ಟ್ರಸ್ಟ್ ಕಾಯ್ದೆಯನ್ವಯ/ನೋಂದಣಿ ನಿಯಮಗಳನ್ವಯ ನೋಂದಾಯಿತ ಸಂಸ್ಥೆಯಾಗಿರಬೇಕು. ಸಂಸ್ಥೆಯು ನೋಂದಣಿಯಾಗಿ ಕನಿಷ್ಠ 2 ವರ್ಷಗಳಾಗಿರಬೇಕು.
2. ಟ್ರಸ್ಟ್‌ನ ಸದಸ್ಯರು ಬೇರೆ ಬೇರೆ ಕುಟುಂಬಗಳಿಗೆ ಸೇರಿದವರಾಗಿರಬೇಕು.
3. ಸಹಾಯಧನ ಬಯಸುವ ಸಂಘ ಸಂಸ್ಥೆಗಳು/ಟ್ರಸ್ಟ್‌ಗಳು, ಹಿಂದಿನ 2 ವರ್ಷಗಳ ಆಡಿಟ್ ವರದಿಗಳನ್ನು ಚಾರ್ಟರ್ಡ್ ಅಕೌಂಟೆಂಟ್‌ರವರಿಂದ ಆಡಿಟ್ ಮಾಡಿಸಿ ಅರ್ಜಿಯೊಂದಿಗೆ ಸಲ್ಲಿಸಬೇಕು.
4. ಸಮುದಾಯ ಭವನ/ವಿದ್ಯಾರ್ಥಿ ನಿಲಯದ ಕಟ್ಟಡದ ನಿರ್ಮಾಣಕ್ಕೆ ಅನುದಾನ ಬಯಸುವವರು ಅಂದಾಜು ವೆಚ್ಚದ ಕನಿಷ್ಠ 25 ರಷ್ಟು ಮೊತ್ತವನ್ನು ಅವರ ಸ್ವಂತ ಸಂಪನ್ಮೂಲಗಳಿಂದ ಭರಿಸಬೇಕು.

5. ಸಹಾಯಧನ ಬಯಸುವ ಸಂಘ/ಸಂಸ್ಥೆಗಳು/ಟ್ರಸ್ಟ್‌ಗಳು ಉದ್ದೇಶಿಸಿರುವ ಕಟ್ಟಡ ನಿರ್ಮಾಣಕ್ಕೆ ಸಂಸ್ಥೆಯ ಹೆಸರಿನಲ್ಲಿ ಜಮೀನು/ನಿವೇಶನವನ್ನು ಹೊಂದಿರಬೇಕು ಅಥವಾ ಸರ್ಕಾರಿ/ ಸರ್ಕಾರೇತರ ಸಂಸ್ಥೆಗಳಿಂದ ಕನಿಷ್ಠ 30 ವರ್ಷಗಳಿಗಿಂತ ಕಡಿಮೆ ಇಲ್ಲದ ಅವಧಿಗೆ ಗುತ್ತಿಗೆಗೆ (ಲೀಸ್) ಪಡೆದಿರಬೇಕು.
6. ಕಟ್ಟಡದ ನೀಲ ನಕ್ಷೆಗೆ ಸ್ಥಳೀಯ ಮಹಾನಗರಪಾಲಿಕೆ/ನಗರಸಭೆ / ಪುರಸಭೆ / ಗ್ರಾಮ ಪಂಚಾಯ್ತಿಯಿಂದ ಅನುಮೋದನೆ ಪಡೆದಿರಬೇಕು ಮತ್ತು ಕಟ್ಟಡ ನಿರ್ಮಿಸಲು ಪರವಾನಿಗೆಯನ್ನು ಪಡೆದಿರಬೇಕು
7. ಉದ್ದೇಶಿತ ಕಟ್ಟಡದ ಅಂದಾಜು ಪಟ್ಟಿಯನ್ನು ಸರ್ಕಾರದ ಸಂಸ್ಥೆಗಳ ಸಹಾಯಕ ಕಾರ್ಯಪಾಲಕ ಅಭಿಯಂತರರು / ಕಾರ್ಯಪಾಲಕ ಅಭಿಯಂತರರು ಅಥವಾ ಅಂಗೀಕೃತ ಅಭಿಯಂತರರಿಂದ ಅಥವಾ ಅಂಗೀಕೃತ ವಾಸ್ತುಶಿಲ್ಪಿಗಳಿಂದ ಅನುಮೋದಿಸಲ್ಪಟ್ಟಿರಬೇಕು.
8. ಈ ಕೆಳಗಿನ ಪ್ರದೇಶಗಳಲ್ಲಿ ನಿರ್ಮಿಸುವ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡಗಳಿಗೆ ಅನುದಾನದ ಗರಿಷ್ಠ ಮಿತಿಯನ್ನು ಕೆಳಕಂಡಂತೆ ನಿಗದಿಪಡಿಸಿದೆ.

ಕ್ರ ಸಂ	ಸ್ಥಳ	ಗರಿಷ್ಠ ಸಹಾಯಧನ
1	ಗ್ರಾಮ ಪಂಚಾಯಿತಿ /ಪಟ್ಟಣ ಪಂಚಾಯಿತಿ	ರೂ.10.00 ಲಕ್ಷ
2	ತಾಲ್ಲೂಕು ಕೇಂದ್ರ ಸ್ಥಾನ.	ರೂ.25.00 ಲಕ್ಷ
3	ಜಿಲ್ಲಾ ಕೇಂದ್ರಸ್ಥಾನ	ರೂ.50.00 ಲಕ್ಷ

9. ಸಹಾಯಧನ ಪಡೆಯಲಿಚ್ಛಿಸುವ ಸಂಸ್ಥೆಗಳು / ಟ್ರಸ್ಟ್‌ಗಳು ಅನುಬಂಧ-ಅ ರ ಅರ್ಜಿ ನಮೂನೆಯಲ್ಲಿ ನಿಗದಿತ ದಾಖಲಾತಿಯೊಂದಿಗೆ, ಅರ್ಜಿಯನ್ನು ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ಸಲ್ಲಿಸಬೇಕು.
10. ಒಂದು ಸಂಘ ಅಥವಾ ಸಂಸ್ಥೆಯು ಈ ಕಾರ್ಯಕ್ರಮದಡಿ ಇಲಾಖೆಯಿಂದ ಒಂದು ಸ್ಥಳದಲ್ಲಿ ಒಂದು ಬಾರಿಗೆ ಕಟ್ಟಡ ನಿರ್ಮಾಣ ಮಾಡಲು ಮಾತ್ರ ಸಹಾಯಧನ ಪಡೆಯಲು ಅರ್ಹವಾಗಿರುತ್ತದೆ.
11. ಮಂಜೂರು ಮಾಡಿದ ಸಹಾಯಧನವನ್ನು ಒಂದೇ ಕಂತಿನಲ್ಲಿ ಅಥವಾ ಸರ್ಕಾರದ ಆದೇಶಾನುಸಾರ ಸಂಬಂಧಿಸಿದ ಜಿಲ್ಲಾಧಿಕಾರಿಗಳ ಪಿ.ಡಿ ಖಾತೆ/ಇತರೆ ಖಾತೆಗಳಿಗೆ ಬಿಡುಗಡೆ ಮಾಡುವುದು.
12. ನೇರವಾಗಿ ಸರ್ಕಾರದಿಂದ ಸಹಾಯಧನ ಮಂಜೂರಾದ ಪ್ರಕರಣಗಳಲ್ಲಿ ಮಾರ್ಗಸೂಚಿಯಲ್ಲಿರುವ ದಾಖಲಾತಿಗಳನ್ನು ಆಯಾ ಜಿಲ್ಲಾಧಿಕಾರಿಗಳು ಸಂಸ್ಥೆಗಳಿಂದ ಪಡೆದು ಹಣ ಬಿಡುಗಡೆ ಮಾಡುವುದು.
13. ಸಂಬಂಧಿಸಿದ ಸಂಸ್ಥೆಗೆ, ಕಟ್ಟಡದ ಕಾಮಗಾರಿಯ ಪ್ರಗತಿಯನ್ನು ಆಧರಿಸಿ ಜಿಲ್ಲಾಧಿಕಾರಿಗಳ ಹಂತದಲ್ಲಿಯೇ ಮೂರು ಕಂತುಗಳಲ್ಲಿ ಸಹಾಯಧನವನ್ನು 25:50:25 ರ ಅನುಪಾತದಂತೆ ಬಿಡುಗಡೆ ಮಾಡಲಾಗುವುದು.
14. ಕಟ್ಟಡ ನಿರ್ಮಾಣಕ್ಕೆ ಮೊದಲನೇ ಕಂತಿನ ಸಹಾಯಧನ ಪಡೆದ ದಿನಾಂಕದಿಂದ ನಾಲ್ಕು ತಿಂಗಳುಗಳೊಳಗಾಗಿ ಕಟ್ಟಡದ ಕಾಮಗಾರಿಯನ್ನು ಸಂಸ್ಥೆ ಪ್ರಾರಂಭಿಸದಿದ್ದಲ್ಲಿ ಬಿಡುಗಡೆ ಮಾಡಲಾಗಿರುವ ಪೂರ್ಣ ಮೊತ್ತವನ್ನು ಸಂಸ್ಥೆಯಿಂದ ಜಿಲ್ಲಾಧಿಕಾರಿಗಳು ಹಿಂದಕ್ಕೆ ಪಡೆಯತಕ್ಕದ್ದು.
15. ಕಟ್ಟಡ ನಿರ್ಮಾಣಕ್ಕೆ, ಮೊದಲನೇ ಕಂತಿನ ಸಹಾಯಧನ ಪಡೆದ ದಿನಾಂಕದಿಂದ ಮೂರು ವರ್ಷಗಳೊಳಗಾಗಿ, ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸತಕ್ಕದ್ದು. ಅನುಮತಿಯೊಂದಿಗೆ ಒಂದು ವರ್ಷ ಹೆಚ್ಚು ಅವಧಿಯಲ್ಲಿ ಪೂರ್ಣಗೊಳಿಸಬೇಕು.
16. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಕಟ್ಟಡದ ಕಾಮಗಾರಿಯ ಆರ್ಥಿಕ ಮತ್ತು ಭೌತಿಕ ಪ್ರಗತಿಯ ಬಗ್ಗೆ ವರದಿಯನ್ನು 8 ವಿವಿಧ ಕೋನಗಳಿಂದ ತೆಗೆದ ಛಾಯಾಚಿತ್ರಗಳನ್ನು ಆಧರಿಸಿ ಜಿಲ್ಲಾಧಿಕಾರಿಗಳು ಹಣ ಬಿಡುಗಡೆ ಮಾಡುವುದು.
17. ಸರ್ಕಾರದ ಅನುದಾನ ಪಡೆದು ನಿರ್ಮಿಸುವ ವಿದ್ಯಾರ್ಥಿ ನಿಲಯದ ಕಟ್ಟಡವನ್ನು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಉಪಯೋಗಕ್ಕೆ ಮಾತ್ರ ಬಳಸತಕ್ಕದ್ದು.
18. ಸಮುದಾಯ ಭವನಗಳನ್ನು ನಿರ್ಮಿಸಲು ಹಿಂದುಳಿದ ವರ್ಗಗಳ ಅನುಕೂಲಕ್ಕೋಸ್ಕರ ಅವಶ್ಯಕತೆ ಇರುವ ಗ್ರಾಮಗಳಲ್ಲಿ/ಸ್ಥಳಗಳಲ್ಲಿ ನೋಂದಾಯಿತ ಸಂಘ/ಸ್ವಯಂಸೇವಾ ಸಂಸ್ಥೆಗಳು/ಟ್ರಸ್ಟ್‌ಗಳು

ಮುಂದೆ ಬಾರದೆ ಇದ್ದಲ್ಲಿ, ಅಥವಾ ಸಂಸ್ಥೆಗಳು ಇಲ್ಲದಿದ್ದಲ್ಲಿ ಹಿಂದುಳಿದ ವರ್ಗಗಳ ಸಮುದಾಯ ಭವನಗಳು ಆ ಗ್ರಾಮಗಳಲ್ಲಿ ಅವಶ್ಯಕತೆ ಇದ್ದಲ್ಲಿ ಅಂತಹ ಗ್ರಾಮಗಳಲ್ಲಿ ಸರ್ಕಾರಿ ಅಂಗ ಸಂಸ್ಥೆ/ಇಲಾಖೆಗಳ ಮುಖಾಂತರ ನಿರ್ಮಾಣ ಮಾಡುವ ಅಧಿಕಾರವನ್ನು ಜಿಲ್ಲಾಧಿಕಾರಿಗಳಿಗೆ ನೀಡಲಾಗಿದೆ.

ಸಹಾಯಧನವನ್ನು ಮಂಜೂರು ಮಾಡುವ ಅಧಿಕಾರವನ್ನು ಈ ಕೆಳಗಿನಂತೆ ವಹಿಸಲಾಗಿದೆ.

(ಅ)	ರೂ.10.00ಲಕ್ಷಗಳವರೆಗೆ	– ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
(ಆ)	ರೂ.10.00ಲಕ್ಷಗಳಿಗಿಂತ ಮೇಲ್ಪಟ್ಟು	– ರಾಜ್ಯ ಸರ್ಕಾರ

2) ಹಿಂದುಳಿದ ವರ್ಗಗಳ ಜನಾಂಗದ ಸಂಘ-ಸಂಸ್ಥೆಗಳು ನಡೆಸುವ ಅನುದಾನರಹಿತ /ಅನುದಾನಿತ ಖಾಸಗಿ ವಿದ್ಯಾರ್ಥಿನಿಲಯಗಳಿಗೆ ಒಂದು ಬಾರಿಗೆ ಅನುದಾನ

(ಅ) ಈ ಕಾರ್ಯಕ್ರಮದಡಿ ಸಹಾಯಧನ ಪಡೆಯಲು ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ, ಮತ್ತು 3ಬಿ ಗೆ ಸೇರಿದ ನೊಂದಾಯಿತ ಸಂಘ/ಸ್ವಯಂ ಸೇವಾ ಸಂಸ್ಥೆ/ಟ್ರಸ್ಟ್‌ಗಳು ಅರ್ಹರಿರುತ್ತವೆ.

(ಆ) ಸಂಸ್ಥೆಯು ವಿದ್ಯಾರ್ಥಿನಿಲಯವನ್ನು ಕನಿಷ್ಠ 5 ವರ್ಷಗಳಿಂದ ನಡೆಸುತ್ತಿರಬೇಕು.

(ಇ) ಈ ಕಾರ್ಯಕ್ರಮದಡಿ ಒಂದು ಬಾರಿಗೆ ರೂ.5.00 ಲಕ್ಷಗಳ ಸಹಾಯಧನವನ್ನು ಮಂಜೂರು ಮಾಡುವ ಅಥವಾ ಅವಶ್ಯಕತೆಗೆ ತಕ್ಕಷ್ಟು ಹಣವನ್ನು ಬಿಡುಗಡೆಗೊಳಿಸುವ ಷರತ್ತಿಗೊಳಪಟ್ಟಿದೆ.

(ಈ) ಈ ಕಾರ್ಯಕ್ರಮದಡಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಅನುದಾನ ಪಡೆಯುತ್ತಿರುವ ಅನುದಾನಿತ ಖಾಸಗಿ ವಿದ್ಯಾರ್ಥಿ ನಿಲಯಗಳು ಹಾಗೂ ಹಿಂದುಳಿದ ವರ್ಗಗಳ ಸಂಘ-ಸಂಸ್ಥೆಗಳು ನಡೆಸುತ್ತಿರುವ ಅನುದಾನ ರಹಿತ ಖಾಸಗಿ ವಿದ್ಯಾರ್ಥಿ ನಿಲಯಗಳ ಕೂಡ ಒಂದು ಬಾರಿಗೆ ಅನುದಾನ ಪಡೆಯಲು ಅರ್ಹರಿರುತ್ತಾರೆ.

3) ದೇವರಾಜ ಅರಸು ಭವನ ನಿರ್ಮಾಣ

ಪ್ರತಿ ತಾಲ್ಲೂಕು ಕೇಂದ್ರದಲ್ಲಿ ರೂ.1.00 ಕೋಟಿ ವೆಚ್ಚದಲ್ಲಿ ಡಿ.ದೇವರಾಜ ಅರಸು ಭವನ ನಿರ್ಮಾಣ ಕಾರ್ಯವನ್ನು ಕೈಗೊಳ್ಳುತ್ತಿದ್ದು, ನಿವೇಶನ ಲಭ್ಯವಾದಂತೆ, ದೇವರಾಜ ಅರಸು ಭವನಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಅನುಬಂಧ–1

ವಿಧಾನ ಪರಿಷತ್ ಮಾನ್ಯ ಸದಸ್ಯರಾದ ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1705ಕ್ಕೆ ಅನುಬಂಧ–1.

* * *

ನಿಗಮದಿಂದ ಸೌಲಭ್ಯ ಒದಗಿಸಲಾಗುವ ಯೋಜನೆಗಳ ವಿವರ ಹಾಗೂ ಆಯ್ಕೆಗೆ ಇರುವ ಮಾನದಂಡಗಳು.

1. **ಚೈತನ್ಯ ಸಹಾಯಧನ ಯೋಜನೆ:**

➢ ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ ಮತ್ತು 3ಬಿ ಸೇರಿದವರಾಗಿರಬೇಕು (ವಿಶ್ವಕರ್ಮ ಮತ್ತು ಇದರ ಉಪ ಸಮುದಾಯಗಳು, ಉಪ್ಪಾರ ಮತ್ತು ಇದರ ಉಪ ಸಮುದಾಯಗಳು, ಅಂಬಿಗ ಮತ್ತು ಇದರ ಉಪ ಸಮುದಾಯಗಳು ಮತ್ತು ಮತೀಯ ಅಲ್ಪಸಂಖ್ಯಾತರನ್ನು ಹೊರತುಪಡಿಸಿ) ಹಾಗೂ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶವರಿಗೆ ರೂ.40,000/– ಪಟ್ಟಣ ಪ್ರದೇಶದವರಿಗೆ ರೂ.55,000/–ಗಳ ಒಳಗಿರಬೇಕು.

➢ ಬ್ಯಾಂಕ್‌ಗಳ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತದೆ.

➢ **ಉದ್ದೇಶ:** ಕೃಷಿ ಅವಲಂಬಿತ ಚಟುವಟಿಕೆಗಳು, ವ್ಯಾಪಾರ, ಸೇವಾವಲಯ ಮತ್ತು ಸಾರಿಗೆ ವಲಯದ ಉದ್ದೇಶಗಳು.

➢ ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 739 ಬಿಎಂಎಸ್ 2018, ಬೆಂಗಳೂರು ದಿನಾಂಕ:23/10/2018ರನ್ವಯ ಈ ಯೋಜನೆಯಲ್ಲಿ ಘಟಕ ವೆಚ್ಚ ರೂ.25000/–ಗಳಿಂದ ರೂ.5.00ಲಕ್ಷಗಳ ಘಟಕಗಳಿಗೆ ಶೇ.20ರಷ್ಟು ಗರಿಷ್ಠ ರೂ.25000/–ಗಳ ಸಹಾಯಧನ ಮಾತ್ರ ನಿಗಮದಿಂದ ಮಂಜೂರು ಮಾಡಲಾಗುವುದು. ಉಳಿಕೆ ಮೊತ್ತ ಬ್ಯಾಂಕ್ ಪಾಲಿನ ಸಾಲವಾಗಿರುತ್ತದೆ.

➢ ಬ್ಯಾಂಕ್ ಪಾಲಿನ ಸಾಲಕ್ಕೆ ಬ್ಯಾಂಕ್‌ಗಳಲ್ಲಿ ವಿಧಿಸುವ ಚಾಲ್ತಿಯಲ್ಲಿರುವ ಬಡ್ಡಿದರ.

➢ ಆಯಾ ಬ್ಯಾಂಕ್ ಶಾಖೆಗೆ ನಿಗದಿಪಡಿಸಿದ ಗುರಿಗೆ 1:1.25 ಅನುಪಾತದಲ್ಲಿ ಅರ್ಜಿ ಶಿಫಾರಸ್ಸು ಮಾಡುವುದು.

➢ ಆಯ್ಕೆ ಸಮಿತಿ: ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರ ಅಧ್ಯಕ್ಷತೆಯಲ್ಲಿ ರಚಿಸಿರುವ ಆಯ್ಕೆ ಸಮಿತಿಯ ಮೂಲಕ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು.

➢ ಸಹಾಯಧನ ಮಂಜೂರಾತಿಗೆ ಸಲ್ಲಿಸುವ ಪ್ರಸ್ತಾವನೆಯೊಂದಿಗೆ ಬ್ಯಾಂಕ್ ಶಾಖೆಯಿಂದ ನೀಡಿರುವ ಮಂಜೂರಾತಿ ಪತ್ರ/ಸಹಾಯಧನ ಕ್ಲೈಂ ಪತ್ರದ ಜೆರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ಸಲ್ಲಿಸುವುದು.

2. ಡಿ.ದೇವರಾಜ ಅರಸು ಸ್ವಯಂ ಉದ್ಯೋಗ ಸಾಲ ಯೋಜನೆ:

- ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿಗೆ ಸೇರಿದವರಾಗಿರಬೇಕು. (ವಿಶ್ವಕರ್ಮ ಮತ್ತು ಇದರ ಉಪ ಸಮುದಾಯಗಳು, ಉಪ್ಪಾರ ಮತ್ತು ಇದರ ಉಪ ಸಮುದಾಯಗಳು, ಅಂಬಿಗ ಮತ್ತು ಇದರ ಉಪ ಸಮುದಾಯಗಳು ಮತ್ತು ಮತೀಯ ಅಲ್ಪಸಂಖ್ಯಾತರನ್ನು ಹೊರತುಪಡಿಸಿ)
- ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.40,000/-ಗಳು ಪಟ್ಟಣ ಪ್ರದೇಶದವರಿಗೆ ರೂ.55,000/-ಗಳ ಒಳಗಿರಬೇಕು.
- ಅರ್ಜಿದಾರರ ವಯಸ್ಸು 18 ರಿಂದ 55 ವರ್ಷದೊಳಗಿರಬೇಕು.
- ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.
- ಈ ಹಿಂದೆ ಈಗಾಗಲೇ ನಿಗಮದ ಯೋಜನೆಗಳಲ್ಲಿ ಸೌಲಭ್ಯ ಪಡೆದಿರಬಾರದು.
- **ಸಾಲ ಉದ್ದೇಶಗಳು:** ಈ ಯೋಜನೆಯಲ್ಲಿ ಕೃಷಿ ಅವಲಂಭಿತ ಚಟುವಟಿಕೆಗಳು, ವ್ಯಾಪಾರ ಚಟುವಟಿಕೆಗಳು ಹಾಗೂ ಸೇವಾ ವಲಯ ಚಟುವಟಿಕೆಗಳಿಗೆ ಸಾಲ ಸೌಲಭ್ಯ ಒದಗಿಸಲಾಗುವುದು.

3. ಕಿರುಸಾಲ ಯೋಜನೆ:

- **ಸಾಲದ ಉದ್ದೇಶ:** ಸಣ್ಣ ಪುಟ್ಟ ವ್ಯಾಪಾರ ಚಟುವಟಿಕೆಗಳಾದ ಹಣ್ಣು ವ್ಯಾಪಾರ, ತರಕಾರಿ ವ್ಯಾಪಾರ, ಹಾಲು ವ್ಯಾಪಾರ, ಮೀನು ವ್ಯಾಪಾರ, ಟೀ/ಕಾಫಿ ಸ್ಟಾಲ್ ಇತ್ಯಾದಿ ಸಣ್ಣ ಪುಟ್ಟ ವ್ಯಾಪಾರದ ಚಟುವಟಿಕೆಗಳಿಗೆ ಪ್ರತಿ ಸದಸ್ಯರಿಗೆ ಗರಿಷ್ಠ ರೂ.15,000/-ಗಳ ಆರ್ಥಿಕ ನೆರವು.
- **ಅರ್ಹತೆ:** ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿಗೆ ಸೇರಿದವರಾಗಿರಬೇಕು. (ವಿಶ್ವಕರ್ಮ ಮತ್ತು ಇದರ ಉಪ ಸಮುದಾಯಗಳು, ಉಪ್ಪಾರ ಮತ್ತು ಇದರ ಉಪ ಸಮುದಾಯಗಳು, ಅಂಬಿಗ ಮತ್ತು ಇದರ ಉಪ ಸಮುದಾಯಗಳು ಮತ್ತು ಮತೀಯ ಅಲ್ಪಸಂಖ್ಯಾತರನ್ನು ಹೊರತುಪಡಿಸಿ)
- **ಸಹಾಯಧನ:** ಪ್ರತಿ ಸದಸ್ಯರಿಗೆ ಗರಿಷ್ಠ ರೂ.5,000/-ಗಳು.
- **ಸಾಲದ ಮೊತ್ತ:** ಪ್ರತಿ ಸದಸ್ಯರಿಗೆ ಗರಿಷ್ಠ ರೂ.10,000/-ಗಳು.
- **ಬಡ್ಡಿದರ:** ಸ್ವ ಸಹಾಯ ಸಂಘಗಳು ಸಾಲದ ಮೊತ್ತವನ್ನು ವಾರ್ಷಿಕ ಶೇ.4ರ ಬಡ್ಡಿಯೊಂದಿಗೆ ನಿಗಮಕ್ಕೆ ಹಿಂದಿರುಗಿಸಬೇಕಾಗಿರುತ್ತದೆ. ಶೇ.1ರ ಭಾಗ ಬಡ್ಡಿಯನ್ನು ಹೆಚ್ಚುವರಿಯಾಗಿ ಪಡೆದು ಸ್ವ-ಸಹಾಯ ಗುಂಪುಗಳ ಸೇವಾ ಶುಲ್ಕವಾಗಿ ಇಟ್ಟುಕೊಳ್ಳಬಹುದು.
- ಫಲಾನುಭವಿಗಳು ಸ್ವ ಸಹಾಯ ಗುಂಪುಗಳ ಸದಸ್ಯರಾಗಿರಬೇಕು. ಫಲಾನುಭವಿಗಳು ಬಿ.ಪಿ.ಎಲ್. ಕುಟುಂಬಕ್ಕೆ ಸೇರಿದವರಾಗಿರಬೇಕು. ಸರ್ಕಾರಿ/ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಲ್ಲಿ ಉದ್ಯೋಗದಲ್ಲಿರಬಾರದು.

4. <u>ಅರಿವು-ಶೈಕ್ಷಣಿಕ ಸಾಲ ಯೋಜನೆ</u>

- **ಸಾಲದ ಉದ್ದೇಶ:** ಹಿಂದುಳಿದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶೈಕ್ಷಣಿಕಾಭಿವೃದ್ಧಿಗಾಗಿ ಆರ್ಥಿಕ ನೆರವು.
- **ಸಾಲದ ಮೊತ್ತ:** ವಾರ್ಷಿಕ ರೂ.1.00ಲಕ್ಷಗಳಂತೆ ಕೋರ್ಸ್‌ನ ಅವಧಿಗೆ ಗರಿಷ್ಠ ರೂ.4.00ಲಕ್ಷಗಳಿಂದ ರೂ.5.00ಲಕ್ಷಗಳ ವರೆಗೆ ಸಾಲ.
- **ಬಡ್ಡಿದರ:** ವಾರ್ಷಿಕ ಶೇ.2ರಷ್ಟು.
- **ಅರ್ಹತೆ:**
- ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿಗೆ ಸೇರಿದವರಾಗಿರಬೇಕು. (ವಿಶ್ವಕರ್ಮ ಮತ್ತು ಇದರ ಉಪ ಸಮುದಾಯಗಳು, ಉಪ್ಪಾರ ಮತ್ತು ಇದರ ಉಪ ಸಮುದಾಯಗಳು, ಅಂಬಿಗ ಮತ್ತು ಇದರ ಉಪ ಸಮುದಾಯಗಳು ಮತ್ತು ಮತೀಯ ಅಲ್ಪಸಂಖ್ಯಾತರನ್ನು ಹೊರತುಪಡಿಸಿ)
- ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ಆದಾಯ ರೂ.3.50ಲಕ್ಷಗಳ ಮಿತಿಯಲ್ಲಿರಬೇಕು.
- ಸಾಮಾನ್ಯ ಪ್ರವೇಶ ಪರೀಕ್ಷೆ ಮೂಲಕ (ಸಿ.ಇ.ಟಿ.) ಪ್ರವೇಶ ಪಡೆದಿರಬೇಕು.
- **ವ್ಯಾಸಂಗದ ಕೋರ್ಸ್‌ಗಳು:** (1)ಬಿ.ಇ., (2)ಎಂ.ಬಿ.ಬಿ.ಎಸ್., (3)ಬಿ.ಯೂ.ಎಂ.ಎಸ್., (4)ಬಿ.ಡಿ.ಎಸ್. (5)ಬಿ.ಎ.ಎಂ.ಎಸ್. (6)ಬಿ.ಎಚ್.ಎಂ.ಎಸ್. (7)ಎಂ.ಬಿ.ಎ. (8)ಎಂ.ಟೆಕ್. (9)ಎಂ.ಇ., (10)ಎಂ.ಡಿ., (11)ಪಿಹೆಚ್.ಡಿ. (12)ಬಿ.ಸಿ.ಎ./ಎಂ.ಸಿ.ಎ (13)ಎಂ.ಎಸ್.ಆಗ್ರಿಕಲ್ಚರ್ (14)ಬಿ.ಎಸ್‌ಸಿ. ನರ್ಸಿಂಗ್, (15)ಬಿ.ಫಾರಂ/ಎಂ.ಫಾರಂ (16)ಬಿ.ಎಸ್‌ಸಿ. ಪ್ಯಾರಾ ಮೆಡಿಕಲ್ (17)ಬಿ.ಎಸ್‌ಸಿ. ಬಯೋ ಟೆಕ್ನಾಲಜಿ (18)ಬಿ.ಟೆಕ್ (19)ಬಿ.ಪಿ.ಟಿ. (20)ಬಿ.ವಿ.ಎಸ್.ಸಿ/ಎಂ.ವಿ.ಎಸ್.ಸಿ. (21)ಬಿ.ಎನ್.ಎಂ. (22)ಬಿ.ಹೆಚ್.ಎಮ್. (23)ಎಂ.ಡಿ.ಎಸ್. (24)ಎಂ.ಎಸ್.ಡಬ್ಲ್ಯೂ (25)ಎಲ್.ಎಲ್.ಎಂ. (26)ಎಂ.ಎಫ್.ಎ. (27)ಎಂ.ಎಸ್‌ಸಿ. ಬಯೋ ಟೆಕ್ನಾಲಜಿ ಮತ್ತು (28)ಎಂ.ಎಸ್‌ಸಿ. ಎಜಿ.
- **ಮರುಪಾವತಿ:** ಕೋರ್ಸ್ ಪೂರ್ಣಗೊಂಡ 4 ತಿಂಗಳ ನಂತರ 3 ವರ್ಷಗಳಲ್ಲಿ ಮಾಸಿಕ ಕಂತುಗಳಲ್ಲಿ ಮರುಪಾವತಿ ಮಾಡುವುದು.
- **ಅಭ್ಯರ್ಥಿಗಳ ಆಯ್ಕೆ:** ಈ ಕಾರ್ಯಕ್ರಮದಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪ್ರವೇಶ ಪಡೆದು ವ್ಯಾಸಂಗ ಮಾಡುವ ವಿದ್ಯಾರ್ಥಿಗಳನ್ನು ಹೊರತು ಪಡಿಸಿ, ಇತರೆ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ಜಿಲ್ಲಾ ಆಯ್ಕೆ ಸಮಿತಿ ಮೂಲಕ ಆಯ್ಕೆ ಮಾಡುವುದು.

5. **ವಿದೇಶಿ ವಿಶ್ವ ವಿದ್ಯಾನಿಲಯದಲ್ಲಿ ಉನ್ನತ ವ್ಯಾಸಂಗಕ್ಕೆ ಬಡ್ಡಿ ರಹಿತ ಸಾಲ ಯೋಜನೆ:**

- **ಉದ್ದೇಶ:** ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಪಿಹೆಚ್.ಡಿ. ಪೋಸ್ಟ್ ಡಾಕ್ಟ್ರಲ್ ಮತ್ತು ಮಾಸ್ಟರ್ ಡಿಗ್ರಿ ವ್ಯಾಸಂಗಕ್ಕೆ ಪ್ರವೇಶ ಹೊಂದಿದ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿ ವಿದ್ಯಾರ್ಥಿಗಳಿಗೆ ಬಡ್ಡಿ ರಹಿತ ಸಾಲ. (ವಿಶ್ವಕರ್ಮ ಮತ್ತು ಇದರ ಉಪ ಸಮುದಾಯಗಳು, ಉಪ್ಪಾರ ಮತ್ತು ಇದರ ಉಪ ಸಮುದಾಯಗಳು, ಅಂಬಿಗ ಮತ್ತು ಇದರ ಉಪ ಸಮುದಾಯಗಳು ಮತ್ತು ಮತೀಯ ಅಲ್ಪಸಂಖ್ಯಾತರನ್ನು ಹೊರತುಪಡಿಸಿ)
- **ಸಾಲದ ಮೊತ್ತ:** ವಾರ್ಷಿಕ ಗರಿಷ್ಠ ರೂ.3.50ಲಕ್ಷಗಳಂತೆ 3 ವರ್ಷದ ಅವಧಿಗೆ ಗರಿಷ್ಠ ರೂ.10.00ಲಕ್ಷಗಳು.
- **ಆದಾಯ ಮಿತಿ:** ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯಮಿತಿ ರೂ.3.50ಲಕ್ಷಗಳ ಮಿತಿಯಲ್ಲಿರಬೇಕು.
- **ವಯೋಮಿತಿ:** ಅಭ್ಯರ್ಥಿಯ ವಯಸ್ಸು 35 ವರ್ಷಗಳ ವಯೋಮಿತಿಯಲ್ಲಿರಬೇಕು.
- ಅರ್ಹತಾ ಪರೀಕ್ಷೆಯಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿರಬೇಕು.
- **ವ್ಯಾಸಂಗದ ಕೋರ್ಸ್‌ಗಳು:** (1)ಇಂಜಿನಿಯರಿಂಗ್ & ಟೆಕ್ನಾಲಜಿ, (2)ಮ್ಯಾನೇಜ್‌ಮೆಂಟ್ & ಕಾಮರ್ಸ್, (3)ಸೈನ್ಸ್ & ಟೆಕ್ನಾಲಜಿ, (4)ಅಗ್ರಿಕಲ್ಚರ್ & ಅಲೈಡ್ ಸೈನ್ಸ್/ಟೆಕ್ನಾಲಜಿ, (5)ಮೆಡಿಸಿನ್ ಮತ್ತು (6)ಹ್ಯುಮ್ಯಾನಿಟೀಸ್ & ಸೋಸಿಯಲ್ ಸೈನ್ಸ್.
- ವ್ಯಾಸಂಗಕ್ಕೆ ಪ್ರವೇಶ ಪಡೆದ ಬಗ್ಗೆ ವಿದೇಶಿ ವಿಶ್ವವಿದ್ಯಾಲಯಗಳ ಪ್ರವೇಶ ಪತ್ರ, ವೀಸಾ, ಪಾಸ್‌ಪೋರ್ಟ್, ಏರ್‌ಟಿಕೇಟ್ ಪ್ರತಿ ಒದಗಿಸಬೇಕು.
- ಸಾಲದ ಭದ್ರತೆಗೆ ವಿದ್ಯಾರ್ಥಿಯ ತಂದೆ ಅಥವಾ ಜಾಮೀನುದಾರರು ಹೊಂದಿರುವ ಸ್ಥಿರಾಸ್ತಿಯನ್ನು ನಿಗಮಕ್ಕೆ ಆಧಾರ ಮಾಡಬೇಕು. (ಕೊಲ್ಯಾಟರಲ್ ಸೆಕ್ಯೂರಿಟಿ)
- **ಅಭ್ಯರ್ಥಿಗಳ ಆಯ್ಕೆ:** ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ರಚಿಸಿರುವ ಆಯ್ಕೆ ಸಮಿತಿಯ ಮೂಲಕ ಆಯ್ಕೆ ಮಾಡಲಾಗುವುದು.

- **ಗಂಗಾ ಕಲ್ಯಾಣ ನೀರಾವರಿ ಯೋಜನೆ:**

1. **ಉದ್ದೇಶ:** ಹಿಂದುಳಿದ ವರ್ಗಗಳ ಸಣ್ಣ ಮತ್ತು ಅತಿಸಣ್ಣ ರೈತರ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸುವುದು.
2. **ಅರ್ಹತೆ:** ಹಿಂದುಳಿದ ವರ್ಗಗಳ ಪ್ರವರ್ಗ-1ಎ, 2ಎ, 3ಎ ಮತ್ತು 3ಬಿಗೆ ಸೇರಿದವರಾಗಿದ್ದು, ಸಣ್ಣ ಮತ್ತು ಅತಿ ಸಣ್ಣ ರೈತರಾಗಿರಬೇಕು. (ವಿಶ್ವಕರ್ಮ ಮತ್ತು ಇದರ ಉಪ ಸಮುದಾಯಗಳು, ಉಪ್ಪಾರ ಮತ್ತು ಇದರ ಉಪ ಸಮುದಾಯಗಳು, ಅಂಬಿಗ ಮತ್ತು ಇದರ ಉಪ ಸಮುದಾಯಗಳು ಮತ್ತು ಮತೀಯ ಅಲ್ಪಸಂಖ್ಯಾತರನ್ನು ಹೊರತುಪಡಿಸಿ)

3. ಸೌಲಭ್ಯ:

- **ವೈಯಕ್ತಿಕ ನೀರಾವರಿ ಕೊಳವೆಬಾವಿ ಯೋಜನೆ:** ಈ ಯೋಜನೆಯಲ್ಲಿ ಉಡುಪಿ, ದಕ್ಷಿಣ ಕನ್ನಡ, ಕೊಡಗು, ಉತ್ತರ ಕನ್ನಡ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳಲ್ಲಿ ಕನಿಷ್ಠ 1 ಎಕರೆ ಜಮೀನು ಹೊಂದಿರಬೇಕು. ಉಳಿಕೆ ಜಿಲ್ಲೆಗಳಲ್ಲಿ ಒಂದೇ ಸ್ಥಳದಲ್ಲಿ ಹೊಂದಿಕೊಂಡಂತೆ ಇರುವ ಕನಿಷ್ಠ 2 ಎಕರೆ ಜಮೀನು ಇರಬೇಕು.

- **ಸಾಮೂಹಿಕ ನೀರಾವರಿ ಕೊಳವೆ ಬಾವಿ ಯೋಜನೆ:** ಪ್ರವರ್ಗ–1, 2ಎ, 3ಎ ಮತ್ತು 3ಬಿಗೆ ಸೇರಿದ ಕನಿಷ್ಠ 3 ಜನ ಸಣ್ಣ ಮತ್ತು ಅತಿ ಸಣ್ಣ ರೈತರು ಹೊಂದಿರುವ 8 ಎಕರೆ ಮತ್ತು ಅದಕ್ಕಿಂತ ಹೆಚ್ಚಿನ ಜಮೀನಿಗೆ ಸಾಮೂಹಿಕವಾಗಿ ನೀರಾವರಿ ಸೌಲಭ್ಯ.

- **ತೆರೆದಬಾವಿ:** ವೈಯಕ್ತಿಕ ನೀರಾವರಿ ಕೊಳವೆಬಾವಿ ಯೋಜನೆಗೆ ನಿಗದಿಪಡಿಸಿದ ಘಟಕ ವೆಚ್ಚದಲ್ಲಿ ಕರಾವಳಿ ಹಾಗೂ ಮಲೆನಾಡು ಪ್ರದೇಶದ ಜಿಲ್ಲೆಗಳಲ್ಲಿ ತೆರೆದಬಾವಿ ನೀರಾವರಿ ಸೌಲಭ್ಯ ಒದಗಿಸಲು ಅವಕಾಶವಿರುತ್ತದೆ.

- **ಸಾಮೂಹಿಕ ಏತ ನೀರಾವರಿ ಯೋಜನೆ:** ಭೂಮಟ್ಟದಲ್ಲಿ ಶಾಶ್ವತವಾಗಿ ದೊರೆಯುವ ಜಲಸಂಪನ್ಮೂಲಗಳಾದ ನದಿ, ಕೆರೆ, ಹಳ್ಳ ಇವುಗಳಿಗೆ ಮೋಟಾರ್ ಅಳವಡಿಸಿ ಪೈಪ್‌ಲೈನ್ ಮೂಲಕ ಖುಷ್ಕಿ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸುವುದು.

  ಘಟಕವೆಚ್ಚ: ಸಾಮೂಹಿಕ ನೀರಾವರಿ ಯೋಜನೆಗೆ ನಿಗದಿಪಡಿಸಿದ ಘಟಕ ವೆಚ್ಚದಲ್ಲಿ ಸೌಲಭ್ಯ ಒದಗಿಸಲಾಗುವುದು.

  ಈ ಕಾರ್ಯಕ್ರಮಕ್ಕೆ ಆಯಾ ವಿಧಾನಸಭಾ ಕ್ಷೇತ್ರಕ್ಕೆ ನಿಗದಿಪಡಿಸಿದ ಆರ್ಥಿಕ ಗುರಿಯನ್ವಯ ಮೀಸಲಾತಿ ಅನುಪಾತ ಪ್ರವರ್ಗ–1 ಮತ್ತು 2ಎಗೆ 70% ಹಾಗೂ ಪ್ರವರ್ಗ–3ಎ ಮತ್ತು 3ಬಿಗೆ 30%ರಂತೆ ವೈಯಕ್ತಿಕ/ಸಾಮೂಹಿಕ ನೀರಾವರಿ ಘಟಕಗಳನ್ನು ಆಯ್ಕೆ ಮಾಡಿ ಸೌಲಭ್ಯ ಒದಗಿಸಬೇಕು.

ವ್ಯವಸ್ಥಾಪಕ ನಿರ್ದೇಶಕರು.

ಅನುಬಂಧ-1

ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಎಂ.ಎ.ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ-1705 ಕ್ಕೆ

ಕ್ರ ಸಂ.	ಫಲಾನುಭವಿ ಆಧಾರಿತ ಯೋಜನೆ/ಕಾರ್ಯಕ್ರಮ	ಅನುಷ್ಠಾನಗೊಳಿಸಲು ಅನುಸರಿಸುತ್ತಿರುವ ಮಾನದಂಡ
1	**ಸ್ವಯಂ ಉದ್ಯೋಗ ಸಾಲ ಯೋಜನೆ:** ಉಪ್ಪಾರ ಜನಾಂಗದವರು ಸ್ವಯಂ ಉದ್ಯೋಗ ಕೈಗೊಳ್ಳಲು ಆರ್ಥಿಕ ಚಟುವಟಿಕೆಗಳ ಅನುಸಾರ ಗರಿಷ್ಠ ರೂ.2.00 ಲಕ್ಷಗಳವರೆಗೆ ಆರ್ಥಿಕ ನೆರವು. ಇದರಲ್ಲಿ ಗರಿಷ್ಠ ಶೇ.15 ರಷ್ಟು ಸಹಾಯಧನ, ಉಳಿಕೆ ಮೊತ್ತ ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ನಿಗಮದಿಂದಲೇ ನೇರವಾಗಿ ಸಾಲ ಸೌಲಭ್ಯ ಒದಗಿಸಲಾಗುವುದು. ಈ ಯೋಜನೆಯಲ್ಲಿ ಪಡೆದ ಸಾಲವನ್ನು 3 ವರ್ಷಗಳ ಅವಧಿಯಲ್ಲಿ 34 ಮಾಸಿಕ ಕಂತುಗಳಲ್ಲಿ ಅಸಲು ಮತ್ತು ಬಡ್ಡಿಯನ್ನು ಸೇರಿ ಮರುಪಾವತಿಸಬೇಕು. 2 ತಿಂಗಳು ವಿರಾಮಾವಧಿ ಇರುತ್ತದೆ.	1. ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. 2. ಫಲಾನುಭವಿಯು ಉಪ್ಪಾರ ಸಮುದಾಯಕ್ಕೆ ಸೇರಿರಬೇಕು. 3. ಅವರ ವಾರ್ಷಿಕ ಆದಾಯ ಗ್ರಾಮೀಣ ಪ್ರದೇಶದ ಜನರಿಗೆ ರೂ.98,000/- ಹಾಗೂ ಪಟ್ಟಣ ಪ್ರದೇಶದವರಿಗೆ ರೂ.1,20,000/-ಗಳ ಮಿತಿಯಲ್ಲಿರಬೇಕು. 4. ಅರ್ಜಿದಾರರ ವಯಸ್ಸು 18 ರಿಂದ 55 ವರ್ಷದೊಳಗಿರಬೇಕು. 5. ಆರ್ಥಿಕ ಚಟುವಟಿಕೆ ಕೈಗೊಳ್ಳಬೇಕು. 6. ಮಹಿಳೆಯರಿಗೆ ಶೇ.33ರಷ್ಟು ಮತ್ತು ಅಂಗವಿಕಲರಿಗೆ ಶೇ.5ರಷ್ಟು ಮೀಸಲಿರಿಸಿ ಆಯ್ಕೆ ಮಾಡಬೇಕು.
2	**ಅರಿವು ಶೈಕ್ಷಣಿಕ ಸಾಲ ಯೋಜನೆ:** ಈ ಯೋಜನೆಯಡಿ ಇಂಜಿನಿಯರಿಂಗ್, ವೈದ್ಯಕೀಯ, ದಂತ ವೈದ್ಯಕೀಯ ಇತ್ಯಾದಿ ವೃತ್ತಿಪರ ಉನ್ನತ ಕೋರ್ಸ್‌ಗಳಲ್ಲಿ ಸಿ.ಇ.ಟಿ. ಮೂಲಕ ಆಯ್ಕೆಯಾಗಿ ವ್ಯಾಸಂಗ ಮಾಡುವ ಉಪ್ಪಾರ ಜನಾಂಗದ ವಿದ್ಯಾರ್ಥಿಗಳಿಗೆ ವಾರ್ಷಿಕ ಶೇ.2ರ ಬಡ್ಡಿದರದಲ್ಲಿ ವಾರ್ಷಿಕ ಗರಿಷ್ಠ ರೂ.1,00,000/-ಗಳ ಶೈಕ್ಷಣಿಕ ಸಾಲವನ್ನು ಮಂಜೂರು ಮಾಡಲಾಗುವುದು. ಅಭ್ಯರ್ಥಿ ಮತ್ತು ಅವರ ಕುಟುಂಬದವರ ವಾರ್ಷಿಕ ವರಮಾನವು ರೂ.3.50ಲಕ್ಷಗಳ ಮಿತಿಯಲ್ಲಿರಬೇಕು. ಈ ಯೋಜನೆಯಲ್ಲಿ ಪಡೆದ ಸಾಲವು ವಿದ್ಯಾರ್ಥಿಯ ವ್ಯಾಸಂಗ ಪೂರ್ಣಗೊಂಡ 4ನೇ ತಿಂಗಳಿನಿಂದ ಮರುಪಾವತಿ ಪ್ರಾರಂಭವಾಗುವುದು. ಮರುಪಾವತಿ ಅವಧಿ 3 ವರ್ಷಗಳು, ಮಾಸಿಕ ಕಂತುಗಳಲ್ಲಿ ಅಸಲು ಮತ್ತು ಬಡ್ಡಿಯನ್ನು ಸೇರಿ ಮರುಪಾವತಿಸಬೇಕು.	1. ವಿದ್ಯಾರ್ಥಿಯು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. 2. ವಿದ್ಯಾರ್ಥಿಯು ಉಪ್ಪಾರ ಸಮುದಾಯಕ್ಕೆ ಸೇರಿದವರಾಗಿರಬೇಕು. 3. ವಿದ್ಯಾರ್ಥಿಯ ವಯಸ್ಸು 35 ವರ್ಷದ ಮಿತಿಯಲ್ಲಿರಬೇಕು. 4. ವೃತ್ತಿಪರ ಕೋರ್ಸ್‌ಗಳಾದ ಇಂಜಿನಿಯರಿಂಗ್, ವೈದ್ಯಕೀಯ, ದಂತವೈದ್ಯಕೀಯ, ಎಂ.ಸಿ.ಎ, ಎಂ.ಬಿ.ಎ., ಎಂ.ಟೆಕ್ ಮುಂತಾದ ಉನ್ನತ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡಬೇಕು. 5. ಮೆರಿಟ್ ಆಧಾರದ ಮೇಲೆ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರಬೇಕು. 6. ವಿದ್ಯಾರ್ಥಿ ಮತ್ತು ಅವರ ಕುಟುಂಬದ ವಾರ್ಷಿಕ ಆದಾಯ ರೂ.3.50ಲಕ್ಷಗಳ ಮಿತಿಯಲ್ಲಿರಬೇಕು. 7. ಮಹಿಳೆಯರಿಗೆ ಶೇ.33ರಷ್ಟು ಮತ್ತು ಅಂಗವಿಕಲರಿಗೆ ಶೇ.5ರಷ್ಟು ಮೀಸಲಿರಿಸಿ ಆಯ್ಕೆ ಮಾಡಬೇಕು.

3	**ಗಂಗಾ ಕಲ್ಯಾಣ ನೀರಾವರಿ ಯೋಜನೆ:** **ಅ)ವೈಯಕ್ತಿಕ ನೀರಾವರಿ ಕೊಳವೆಬಾವಿ ಯೋಜನೆ:** ಈ ಯೋಜನೆಯಲ್ಲಿ ಉಡುಪಿ, ದಕ್ಷಿಣ ಕನ್ನಡ, ಕೊಡಗು, ಉತ್ತರ ಕನ್ನಡ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳಲ್ಲಿ ಕನಿಷ್ಠ 1 ಎಕರೆ ಜಮೀನು ಹೊಂದಿರಬೇಕು. ಉಳಿಕೆ ಜಿಲ್ಲೆಗಳಲ್ಲಿ ಒಂದೇ ಸ್ಥಳದಲ್ಲಿ ಹೊಂದಿಕೊಂಡಂತೆ ಇರುವ ಕನಿಷ್ಠ 2 ಎಕರೆ ಜಮೀನು ಇರಬೇಕು. ಘಟಕವೆಚ್ಚ: ರೂ.2.50ಲಕ್ಷಗಳು. ರೂ.2.00ಲಕ್ಷಗಳ ಸಹಾಯಧನ(ಸಬ್ಸಿಡಿ) ಹಾಗೂ ರೂ.50,000/-ಗಳು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಸಾಲ. **ಆ)ತೆರೆದಬಾವಿ:** ವೈಯುಕ್ತಿಕ ನೀರಾವರಿ ಕೊಳವೆಬಾವಿ ಯೋಜನೆಗೆ ನಿಗದಿಪಡಿಸಿದ ಘಟಕ ವೆಚ್ಚದಲ್ಲಿ ಕರಾವಳಿ ಹಾಗೂ ಮಲೆನಾಡು ಪ್ರದೇಶದ ಜಿಲ್ಲೆಗಳಲ್ಲಿ ತೆರೆದಬಾವಿ ನೀರಾವರಿ ಸೌಲಭ್ಯ ಒದಗಿಸಲು ಅವಕಾಶವಿರುತ್ತದೆ.	1. ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. 2. ಉಪ್ಪಾರ ಸಮುದಾಯಕ್ಕೆ ಸೇರಿದವರಾಗಿರಬೇಕು. 3. ಸಣ್ಣ ಮತ್ತು ಅತಿ ಸಣ್ಣ ರೈತರ ಕುಟುಂಬಕ್ಕೆ ಸೇರಿರಬೇಕು. 4. ಕನಿಷ್ಠ 2 ಎಕರೆ ಜಮೀನು ಒಂದೇ ಕಡೆ ಇರಬೇಕು. ಉಡುಪಿ, ದಕ್ಷಿಣ ಕನ್ನಡ, ಕೊಡಗು, ಉತ್ತರ ಕನ್ನಡ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳಲ್ಲಿ ಕನಿಷ್ಠ 1 ಎಕರೆ ಜಮೀನು ಹೊಂದಿರಬೇಕು. 5. ವ್ಯವಸಾಯ ವೃತ್ತಿಯನ್ನು ನಿರ್ವಹಿಸುತ್ತಿರಬೇಕು. ಈಗಾಗಲೇ ಯಾವುದೇ ಮೂಲದಿಂದ ನೀರಾವರಿ ಸೌಲಭ್ಯ ಹೊಂದಿರಬಾರದು. 6. ಅರ್ಜಿದಾರರ ವಾರ್ಷಿಕ ವರಮಾನ ರೂ.98,000/-ಗಳನ್ನು (ಗ್ರಾಮೀಣ ಪ್ರದೇಶ) ಮೀರಿರಬಾರದು. 7. ವಯಸ್ಸು 18 ರಿಂದ 55 ವರ್ಷಗಳ ಮಿತಿಯಲ್ಲಿರಬೇಕು. 8. ಮಹಿಳೆಯರಿಗೆ ಶೇ.33ರಷ್ಟು ಮತ್ತು ಅಂಗವಿಕಲರಿಗೆ ಶೇ.5ರಷ್ಟು ಮೀಸಲಿರಿಸಿ ಆಯ್ಕೆ ಮಾಡಬೇಕು.

<u>ಅನುಬಂಧ-1</u>

ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಎಂ.ಎ.ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ-1705 ಕ್ಕೆ

ಕ್ರ ಸಂ.	ಫಲಾನುಭವಿ ಆಧಾರಿತ ಯೋಜನೆ/ಕಾರ್ಯಕ್ರಮ	ಅನುಷ್ಠಾನಗೊಳಿಸಲು ಅನುಸರಿಸುತ್ತಿರುವ ಮಾನದಂಡ
1	**ಸ್ವಯಂ ಉದ್ಯೋಗ ಸಾಲ ಯೋಜನೆ:** ಬೆಸ್ತ, ಕೋಳಿ, ಕಬ್ಬಲಿಗ, ಮೊಗವೀರ ಜನಾಂಗದವರು ಸ್ವಯಂ ಉದ್ಯೋಗ ಕೈಗೊಳ್ಳಲು ಆರ್ಥಿಕ ಚಟುವಟಿಕೆಗಳ ಅನುಸಾರ ಗರಿಷ್ಠ ರೂ.2.00 ಲಕ್ಷಗಳವರೆಗೆ ಆರ್ಥಿಕ ನೆರವು. ಇದರಲ್ಲಿ ಗರಿಷ್ಠ ಶೇ.15 ರಷ್ಟು ಸಹಾಯಧನ, ಉಳಿಕೆ ಮೊತ್ತ ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ನಿಗಮದಿಂದಲೇ ನೇರವಾಗಿ ಸಾಲ ಸೌಲಭ್ಯ ಒದಗಿಸಲಾಗುವುದು. ಈ ಯೋಜನೆಯಲ್ಲಿ ಪಡೆದ ಸಾಲವನ್ನು 3 ವರ್ಷಗಳ ಅವಧಿಯಲ್ಲಿ 34 ಮಾಸಿಕ ಕಂತುಗಳಲ್ಲಿ ಅಸಲು ಮತ್ತು ಬಡ್ಡಿಯನ್ನು ಸೇರಿ ಮರುಪಾವತಿಸಬೇಕು. 2 ತಿಂಗಳು ವಿರಾಮಾವಧಿ ಇರುತ್ತದೆ.	1. ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. 2. ಫಲಾನುಭವಿಯು ಬೆಸ್ತ, ಕೋಳಿ, ಕಬ್ಬಲಿಗ, ಮೊಗವೀರ ಸಮುದಾಯಕ್ಕೆ ಸೇರಿರಬೇಕು. 3. ಅವರ ವಾರ್ಷಿಕ ಆದಾಯ ಗ್ರಾಮೀಣ ಪ್ರದೇಶದ ಜನರಿಗೆ ರೂ.98,000/- ಹಾಗೂ ಪಟ್ಟಣ ಪ್ರದೇಶದವರಿಗೆ ರೂ.1,20,000/-ಗಳ ಮಿತಿಯಲ್ಲಿರಬೇಕು. 4. ಅರ್ಜಿದಾರರ ವಯಸ್ಸು 18 ರಿಂದ 55 ವರ್ಷದೊಳಗಿರಬೇಕು. 5. ಆರ್ಥಿಕ ಚಟುವಟಿಕೆ ಕೈಗೊಳ್ಳಬೇಕು. 6. ಮಹಿಳೆಯರಿಗೆ ಶೇ.33ರಷ್ಟು ಮತ್ತು ಅಂಗವಿಕಲರಿಗೆ ಶೇ.5ರಷ್ಟು ಮೀಸಲಿರಿಸಿ ಆಯ್ಕೆ ಮಾಡಬೇಕು.
2	**ಅರಿವು ಶೈಕ್ಷಣಿಕ ಸಾಲ ಯೋಜನೆ:** ಈ ಯೋಜನೆಯಡಿ ಇಂಜಿನಿಯರಿಂದ, ವೈದ್ಯಕೀಯ, ದಂತ ವೈದ್ಯಕೀಯ ಇತ್ಯಾದಿ ವೃತ್ತಿಪರ ಉನ್ನತ ಕೋರ್ಸ್‌ಗಳಲ್ಲಿ ಸಿ.ಇ.ಟಿ. ಮೂಲಕ ಆಯ್ಕೆಯಾಗಿ ವ್ಯಾಸಂಗ ಮಾಡುವ ಬೆಸ್ತ, ಕೋಳಿ, ಕಬ್ಬಲಿಗ, ಮೊಗವೀರ ಜನಾಂಗದ ವಿದ್ಯಾರ್ಥಿಗಳಿಗೆ ವಾರ್ಷಿಕ ಶೇ.2ರ ಬಡ್ಡಿದರದಲ್ಲಿ ವಾರ್ಷಿಕ ಗರಿಷ್ಠ ರೂ.1,00,000/-ಗಳ ಶೈಕ್ಷಣಿಕ ಸಾಲವನ್ನು ಮಂಜೂರು ಮಾಡಲಾಗುವುದು. ಅಭ್ಯರ್ಥಿ ಮತ್ತು ಅವರ ಕುಟುಂಬದವರ ವಾರ್ಷಿಕ ವರಮಾನವು ರೂ.3.50ಲಕ್ಷಗಳ ಮಿತಿಯಲ್ಲಿರಬೇಕು. ಈ ಯೋಜನೆಯಲ್ಲಿ ಪಡೆದ ಸಾಲವು ವಿದ್ಯಾರ್ಥಿಯ ವ್ಯಾಸಂಗ ಪೂರ್ಣಗೊಂಡ 4ನೇ ತಿಂಗಳಿನಿಂದ ಮರುಪಾವತಿ ಪ್ರಾರಂಭವಾಗುವುದು. ಮರುಪಾವತಿ ಅವಧಿ 3 ವರ್ಷಗಳು, ಮಾಸಿಕ ಕಂತುಗಳಲ್ಲಿ ಅಸಲು ಮತ್ತು ಬಡ್ಡಿಯನ್ನು ಸೇರಿ ಮರುಪಾವತಿಸಬೇಕು.	1. ವಿದ್ಯಾರ್ಥಿಯು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. 2. ವಿದ್ಯಾರ್ಥಿಯು ಬೆಸ್ತ, ಕೋಳಿ, ಕಬ್ಬಲಿಗ, ಮೊಗವೀರ ಸಮುದಾಯಕ್ಕೆ ಸೇರಿದವರಾಗಿರಬೇಕು. 3. ವಿದ್ಯಾರ್ಥಿಯ ವಯಸ್ಸು 35 ವರ್ಷದ ಮಿತಿಯಲ್ಲಿರಬೇಕು. 4. ವೃತ್ತಿಪರ ಕೋರ್ಸ್‌ಗಳಾದ ಇಂಜಿನಿಯರಿಂದ, ವೈದ್ಯಕೀಯ, ದಂತವೈದ್ಯಕೀಯ, ಎಂ.ಸಿ.ಎ, ಎಂ.ಬಿ.ಎ., ಎಂ.ಟೆಕ್ ಮುಂತಾದ ಉನ್ನತ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡಬೇಕು. 5. ಮೆರಿಟ್ ಆಧಾರದ ಮೇಲೆ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರಬೇಕು. 6. ವಿದ್ಯಾರ್ಥಿ ಮತ್ತು ಅವರ ಕುಟುಂಬದ ವಾರ್ಷಿಕ ಆದಾಯ ರೂ.3.50ಲಕ್ಷಗಳ ಮಿತಿಯಲ್ಲಿರಬೇಕು. 7. ಮಹಿಳೆಯರಿಗೆ ಶೇ.33ರಷ್ಟು ಮತ್ತು ಅಂಗವಿಕಲರಿಗೆ ಶೇ.5ರಷ್ಟು ಮೀಸಲಿರಿಸಿ ಆಯ್ಕೆ ಮಾಡಬೇಕು.

....2

3	**ಗಂಗಾ ಕಲ್ಯಾಣ ನೀರಾವರಿ ಯೋಜನೆ:** **ಅ)ವೈಯಕ್ತಿಕ ನೀರಾವರಿ ಕೊಳವೆಬಾವಿ ಯೋಜನೆ:** ಈ ಯೋಜನೆಯಲ್ಲಿ ಉಡುಪಿ, ದಕ್ಷಿಣ ಕನ್ನಡ, ಕೊಡಗು, ಉತ್ತರ ಕನ್ನಡ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳಲ್ಲಿ ಕನಿಷ್ಠ 1 ಎಕರೆ ಜಮೀನು ಹೊಂದಿರಬೇಕು. ಉಳಿಕೆ ಜಿಲ್ಲೆಗಳಲ್ಲಿ ಒಂದೇ ಸ್ಥಳದಲ್ಲಿ ಹೊಂದಿಕೊಂಡಂತೆ ಇರುವ ಕನಿಷ್ಠ 2 ಎಕರೆ ಜಮೀನು ಇರಬೇಕು. ಘಟಕವೆಚ್ಚ: ರೂ.2.50ಲಕ್ಷಗಳು. ರೂ.2.00ಲಕ್ಷಗಳ ಸಹಾಯಧನ(ಸಬ್ಸಿಡಿ) ಹಾಗೂ ರೂ.50,000/–ಗಳು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಸಾಲ. **ಆ)ತೆರೆದಬಾವಿ:** ವೈಯುಕ್ತಿಕ ನೀರಾವರಿ ಕೊಳವೆಬಾವಿ ಯೋಜನೆಗೆ ನಿಗದಿಪಡಿಸಿದ ಘಟಕ ವೆಚ್ಚದಲ್ಲಿ ಕರಾವಳಿ ಹಾಗೂ ಮಲೆನಾಡು ಪ್ರದೇಶದ ಜಿಲ್ಲೆಗಳಲ್ಲಿ ತೆರೆದಬಾವಿ ನೀರಾವರಿ ಸೌಲಭ್ಯ ಒದಗಿಸಲು ಅವಕಾಶವಿರುತ್ತದೆ.	1. ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. 2. ಬೆಸ್ತ, ಕೋಳಿ, ಕಬ್ಬಲಿಗ, ಮೊಗವೀರ ಸಮುದಾಯಕ್ಕೆ ಸೇರಿದವರಾಗಿರಬೇಕು. 3. ಸಣ್ಣ ಮತ್ತು ಅತಿ ಸಣ್ಣ ರೈತರ ಕುಟುಂಬಕ್ಕೆ ಸೇರಿರಬೇಕು. 4. ಕನಿಷ್ಠ 2 ಎಕರೆ ಜಮೀನು ಒಂದೇ ಕಡೆ ಇರಬೇಕು. ಉಡುಪಿ, ದಕ್ಷಿಣ ಕನ್ನಡ, ಕೊಡಗು, ಉತ್ತರ ಕನ್ನಡ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳಲ್ಲಿ ಕನಿಷ್ಠ 1 ಎಕರೆ ಜಮೀನು ಹೊಂದಿರಬೇಕು. 5. ವ್ಯವಸಾಯ ವೃತ್ತಿಯನ್ನು ನಿರ್ವಹಿಸುತ್ತಿರಬೇಕು. ಈಗಾಗಲೇ ಯಾವುದೇ ಮೂಲದಿಂದ ನೀರಾವರಿ ಸೌಲಭ್ಯ ಹೊಂದಿರಬಾರದು. 6. ಅರ್ಜಿದಾರರ ವಾರ್ಷಿಕ ವರಮಾನ ರೂ.98,000/–ಗಳನ್ನು (ಗ್ರಾಮೀಣ ಪ್ರದೇಶ) ಮೀರಿರಬಾರದು. 7. ವಯಸ್ಸು 18 ರಿಂದ 55 ವರ್ಷಗಳ ಮಿತಿಯಲ್ಲಿರಬೇಕು. 8. ಮಹಿಳೆಯರಿಗೆ ಶೇ.33ರಷ್ಟು ಮತ್ತು ಅಂಗವಿಕಲರಿಗೆ ಶೇ.5ರಷ್ಟು ಮೀಸಲಿರಿಸಿ ಆಯ್ಕೆ ಮಾಡಬೇಕು.

ಅನುಬಂಧ-2

ಮಾನ್ಯ ವಿಧಾನಪರಿಷತ್ ಸದಸ್ಯರಾದ ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರಿತಿಲ್ಲದ ಪ್ರಶ್ನೆ ಸಂಖ್ಯೆ 1705ಕ್ಕೆ

* * *

ಕ್ರ ಸಂ.	ಫಲಾನುಭವಿಗಳ ಹೆಸರು ಮತ್ತು ವಿಳಾಸ	ಜಾತಿ ಮತ್ತು ಆದಾಯ	ಸಾಲದ ಉದ್ದೇಶ	ಸೌಲಭ್ಯ ಒದಗಿಸಿದ ಒಟ್ಟು ಮೊತ್ತ
	ವರ್ಷ:2018-19			
	ಯೋಜನೆ ಹೆಸರು: ಸ್ವಯಂ ಉದ್ಯೋಗ ಸಾಲ ಯೋಜನೆ			
	ಜಿಲ್ಲೆಯ ಹೆಸರು: ಹಾಸನ			
1	ನಾಗರತ್ನ ಕೋಂ ವೈರಮುಡಿ 1ನೇ ಕ್ರಾಸ್ ಬೆಸ್ತರಬೀದಿ, ಕಸಬಾ ಹೋ, ಹಾಸನ ತಾ॥	ಬೆಸ್ತರ್ ಪ್ರ-1 11000	ಪ್ರಾವಿಜನ್ ಸ್ಟೋರ್ಸ್	**50000**
2	ಚಂದ್ರಶೇಖರ್ ಬಿನ್ ಜವರಯ್ಯ, ಪೆಟ್ರೋಲ್ ಬಂಕ್ ಹಿಂಭಾಗ, ನುಗ್ಗೇಹಳ್ಳಿ ಹೋ, ಚನ್ನರಾಯಪಟ್ಟಣ ತಾ॥	ಬೆಸ್ತ ಪ್ರ-1 11000	ಹೈನುಗಾರಿಕೆ	**50000**
3	ಬಸವರಾಜು ಬಿನ್ ಚಿಕ್ಕಣ್ಣ, ಚನ್ನರಾಯಪಟ್ಟಣ ಮೈನ್ ರೋಡ್, ನುಗ್ಗೇಹಳ್ಳಿ ಹೋ, ಚನ್ನರಾಯಪಟ್ಟಣ ತಾ॥	ಬೆಸ್ತರ್ ಪ್ರ-1 11000	ಹೈನುಗಾರಿಕೆ	**50000**
4	ತಾಯಮ್ಮ ಕೋಂ ಸ್ವಾಮಿ #141 ಗಂಗಾನಗರ ಕಸಬಾ ಹೋ, ಅರಕಲಗೂಡು ತಾ॥	ಗಂಗಾಮತ ಪ್ರ 1 11000	ಟೈಲರಿಂಗ್ ಮತ್ತು ಬಟ್ಟೆ ವ್ಯಾಪಾರ	**50000**
5	ಲೋಕೇಶ ಬಿನ್ ನಾಗರಾಜು ತೆಲುಗರ ಬೀದಿ ಕಸಬಾ ಹೋ, ಹಾಸನ ತಾ॥	ಬೆಸ್ತರ್ ಪ್ರ-1 11000	ಹೈನುಗಾರಿಕೆ	**50000**
6	ವೇಂಕಟೇಶ ಬಿನ್ ಸಣ್ಣಯ್ಯ ನೂರನಕ್ಕಿ ಗ್ರಾ ಮತ್ತು ಅಂ, ದಂಡಿಗನಹಳ್ಳಿ ಹೋ, ಚನ್ನರಾಯಪಟ್ಟಣ ತಾ॥	ಬೆಸ್ತ ಪ್ರ-1 10000	ಹೈನುಗಾರಿಕೆ	**50000**
	ಗಂಗಾ ಕಲ್ಯಾಣ ನೀರಾವರಿ ಯೋಜನೆ			

ಕ್ರ ಸಂ.	ಫಲಾನುಭವಿಗಳ ಹೆಸರು ಮತ್ತು ವಿಳಾಸ	ಜಾತಿ ಮತ್ತು ಅದಾಯ
1	ಶಿವಣ್ಣ ಬಿನ್ ಹವಳಪ್ಪ ಕಲ್ಯಾಡಿ ಗ್ರಾ॥ ಮತ್ತು ಅಂ॥, ಜಾವಗಲ್ ಹೋ॥, ಅರಸೀಕೆರೆ ತಾ॥	ಬೆಸ್ತ, ಪ್ರ-1 11000

ಅನುಬಂಧ–2

ಮಾನ್ಯ ವಿಧಾನಪರಿಷತ್ ಸದಸ್ಯರಾದ ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರಿತಿಲ್ಲದ ಪ್ರಶ್ನೆ ಸಂಖ್ಯೆ 1705ಕ್ಕೆ

* * *

ಕ್ರ ಸಂ.	ಫಲಾನುಭವಿಗಳ ಹೆಸರು ಮತ್ತು ವಿಳಾಸ	ಜಾತಿ ಮತ್ತು ಅದಾಯ	ಸಾಲದ ಉದ್ದೇಶ	ಸೌಲಭ್ಯ ಒದಗಿಸಿದ ಒಟ್ಟು ಮೊತ್ತ
		ವರ್ಷ:		
		ಯೋಜನೆ ಹೆಸರು: ಸ್ವಯಂ ಉದ್ಯೋಗ ಸಾಲ ಯೋಜನೆ		
		ಜಿಲ್ಲೆಯ ಹೆಸರು: ಹಾಸನ		
1	ನಾಗರತ್ನ ಕೋಂ ಭಾಸ್ಕರ ಹಂಪಾಪುರ ಗ್ರಾ ಮತ್ತು ಅಂ, ಕಸಬಾ ಹೋ, ಅರಕಲಗೂಡು ತಾ॥	ಉಪ್ಪಾರ ಪ್ರ–1 15000	ಹೈನುಗಾರಿಕೆ	**50000**
2	ಶಾಂತಮ್ಮ ಕೋಂ ದೊಡ್ಡೇಗೌಡ, ಹಂಪಾಪುರ ಗ್ರಾ & ಅಂ, ಕಸಬಾ ಹೋ, ಅರಕಲಗೂಡು ತಾ॥	ಉಪ್ಪಾರ ಪ್ರ–1 12000	ಟೈಲರಿಂಗ್ ಮತ್ತು ಬಟ್ಟೆ ವ್ಯಾಪಾರ	**50000**
3	ರಮೇಶ ಬಿನ್ ಕೆಂಚೇಗೌಡ, ಹಂಪಾಪುರ ಗ್ರಾ & ಅಂ, ಕಸಬಾ ಹೋ, ಅರಕಲಗೂಡು ತಾ॥	ಉಪ್ಪಾರ ಪ್ರ–1 15000	ಹೈನುಗಾರಿಕೆ	**50000**
4	ಬಸವರಾಜು ಬಿನ್ ದಾಸೇಗೌಡ, ಹಂಪಾಪುರ ಗ್ರಾ ಮತ್ತು ಅಂ, ಕಸಬಾ ಹೋ, ಅರಕಲಗೂಡು ತಾ॥	ಉಪ್ಪಾರ ಪ್ರ–1 12000	ಪ್ರಾವಿಜನ್ ಸ್ಟೋರ್ಸ್	**50000**
5	ಭಾಗ್ಯ ಕೋಂ ದತ್ತಾತ್ರೇಯ ಮುದ್ದಾಪುರ ಗ್ರಾ & ಅಂ ಬಾಗೂರು ಹೋ, ಚನ್ನರಾಯಪಟ್ಟಣ ತಾ॥	ಉಪ್ಪಾರ ಪ್ರ–1 12000	ಹೈನುಗಾರಿಕೆ	**50000**
6	ಲೀಲಾವತಿ ಕೋಂ ಸತ್ಯನಾರಾಯಣ, ಕೊಟ್ಟಗೆರೆ ಬೀದಿ, ಕಸಬಾ ಹೋ, ಬೇಲೂರು ತಾ॥	ಉಪ್ಪಾರ ಪ್ರ–1 14000	ಟೈಲರಿಂಗ್ ಮತ್ತು ಬಟ್ಟೆ ವ್ಯಾಪಾರ	**50000**
7	ಕೃಷ್ಣೇಗೌಡ ಬಿನ್ ಕರೀಗೌಡ ಹೊಸೂರು ಮತಿಘಟ್ಟ ಗ್ರಾ ಮತ್ತು ಅಂ, ಹಳೇಬೀಡು ಹೋ, ಬೇಲೂರು ತಾ॥	ಉಪ್ಪಾರ ಪ್ರ–1 13000	ಹೈನುಗಾರಿಕೆ	**50000**
8	ಭಾಗ್ಯ ಕೋಂ ಪ್ರಕಾಶ ಉಪ್ಪಾರ ಹೊಸಹಳ್ಳಿ ಗ್ರಾ ಮತ್ತು ಅಂ, ಶಾಂತಿಗ್ರಾಮ ಹೋ, ಹಾಸನ ತಾ॥	ಉಪ್ಪಾರ ಪ್ರ–1 11000	ಟೈಲರಿಂಗ್ ಮತ್ತು ಬಟ್ಟೆ ವ್ಯಾಪಾರ	**50000**

9	ಜಯಂತಿ ಕೋಂ ಹರೀಶ, ಚರ್ಚ್ ಮುಂಭಾಗ, ರಂಗೋಲಿಹಳ್ಳ, ಕಸಬಾ ಹೋ, ಹಾಸನ ತಾ॥	ಉಪ್ಪಾರ ಪ್ರ–1 11000	ಹೈನುಗಾರಿಕೆ	**50000**
10	ರಂಗನಾಥ ಬಿನ್ ರಮೇಶ, ಸತ್ತಿಗರಹಳ್ಳಿ, ಗ್ರಾ, ಕಾರ್ಲೆ ಅಂ, ಕಟ್ಟಾಯ ಹೋ, ಹಾಸನ ತಾ॥	ಉಪ್ಪಾರ ಪ್ರ–1 11000	ವರ್ಕ್‌ಶಾಪ್	**50000**
11	ಕಮಲಮ್ಮ ಕೋಂ ಚಂದ್ರೇಗೌಡ ಟೀ ಗುಡ್ಡೇನಹಳ್ಳಿ ಗ್ರಾ ಮತ್ತು ಅಂ, ಪಾಳ್ಯ ಹೋ, ಆಲೂರು ತಾ॥	ಉಪ್ಪಾರ ಪ್ರ–1 12000	ಹೈನುಗಾರಿಕೆ	**50000**
12	ಆಶಾ ಕೋಂ ಯೋಗೇಶ ಕೆ ಪಾಳ್ಯ ಗ್ರಾ ಮತ್ತು ಅಂ, ಕಣಕಟ್ಟೆ ಹೋ, ಅರಸೀಕೆರೆ ತಾ॥	ಉಪ್ಪಾರ ಪ್ರ–1 12000	ಹೈನುಗಾರಿಕೆ	**50000**
13	ಸುಮಿತ್ರ ಕೋಂ ಶಿವಕುಮಾರ ಸ್ವಾಮಿ ಎಂ ಶಿವಾರ ಗ್ರಾ ಮತ್ತು ಅಂ, ಬಾಗೂರು ಹೋ, ಚನ್ನರಾಯಪಟ್ಟಣ ತಾ॥	ಉಪ್ಪಾರ ಪ್ರ–1 20000	ಹೈನುಗಾರಿಕೆ	**50000**
14	ಮಲ್ಲಮ್ಮ ಕೋಂ ಹರೀಶ, ಚರ್ಚ್ ಮುಂಭಾಗ, ರಂಗೋಲಿಹಳ್ಳ, ಕಸಬಾ ಹೋ, ಹಾಸನ ತಾ॥	ಉಪ್ಪಾರ ಪ್ರ–1 10000	ಹೈನುಗಾರಿಕೆ	**50000**
15	ಮಹಾಲಕ್ಷ್ಮೀ ಕೋಂ ಸತೀಶ್ ನಿಡಗೋಡು ಗ್ರಾ, ಕಸಬಾ ಹೋ, ಬೇಲೂರು ತಾ॥	ಉಪ್ಪಾರ ಪ್ರ–1 15000	ಹೈನುಗಾರಿಕೆ	**50000**

ಗಂಗಾ ಕಲ್ಯಾಣ ನೀರಾವರಿ ಯೋಜನೆ

ಕ್ರ. ಸಂ.	ಫಲಾನುಭವಿಗಳ ಹೆಸರು ಮತ್ತು ವಿಳಾಸ	ಜಾತಿ ಮತ್ತು ಅದಾಯ
1	ನಾಗರಾಜು ಬಿನ್ ದೊಡ್ಡಮುಟ್ಟೇಗೌಡ ಮೂಡಲಕೊಪ್ಪಲು ಗ್ರಾ॥, ಟಿ.ಗುಡ್ಡೇನಹಳ್ಳಿ ಅಂ॥, ಪಾಳ್ಯ ಹೋ॥, ಆಲೂರು ತಾ	ಉಪ್ಪಾರ, ಪ್ರ–1 11000
2	ಪುಟ್ಟಸ್ವಾಮಿಗೌಡ ಬಿನ್ ಕೆಂಗೇಗೌಡ ಸಿ. ಹೊಸಳ್ಳಿ ಗ್ರಾ॥ ಮತ್ತು ಅಂ॥, ಮಾದಿಹಳ್ಳಿ ಹೋ॥, ಬೇಲೂರು ತಾ॥	ಉಪ್ಪಾರ, ಪ್ರ–1 15000